# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –242 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:18–04–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 242 | RNI No: KARKAN/2023/88462 | KA/SK/CTA-874/2024-2026 | Chitradurga | Date: 18-04-2025 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಒಳಮೀಸಲಾತಿ ಜಾರಿ: ಮಾದಿಗ ಜನಾಂಗದ ಅಭ್ಯುದಯಕ್ಕೆ ನಾಂದಿ 2

ಮಾದಕ ವಸ್ತು ಬಳಕೆ: ಶಾಲಾ ಕಾಲೇಜುಗಳ ಆಡಳಿತ ಸಂಸ್ಥೆಗಳು ನಿಗಾ ವಹಿಸಿ 3

ದೃಷ್ಟಿ ದೋಷವುಳ್ಳವರು ಆಶಾಕಿರಣ ಯೋಜನೆ ಸದ್ಬಳಕೆಮಾಡಿಕೊಳ್ಳಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಪ್ರತಿಷ್ಠಿತ ಶಾಲೆ ಪ್ರವೇಶ: ಪ.ವರ್ಗ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

» ಚಿತ್ರದುರ್ಗ

2025–26ನೇ ಸಾಲಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಸಾಮಾಜಿಕವಾಗಿ, ಆರ್ಥಿಕವಾಗಿ ಹಿಂದುಳಿದ ಪರಿಶಿಷ್ಟ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ನಿಯಮಾನುಸಾರ ಅರ್ಹತಾ ಪರೀಕ್ಷೆ ಮೂಲಕ 6ನೇ ತರಗತಿಗೆ ದಾಖಲಾತಿ ಮಾಡಿಕೊಂಡು ಉತ್ತಮ ಗುಣಮಟ್ಟದ ಶಿಕ್ಷಣ ನೀಡಲು ಜಿಲ್ಲೆಯಲ್ಲಿರುವ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶ ನೀಡಲು ಜಿಲ್ಲೆಯ ಪ್ರತಿಭಾವಂತ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮೇ 03 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಅರ್ಹ ವಿದ್ಯಾರ್ಥಿಗಳು ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗಳಿಂದ ಅರ್ಜಿಗಳನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಆಯಾ ತಾಲ್ಲೂಕು ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗಳಿಗೆ ಸಲ್ಲಿಸುವುದು. ಇದೇ ಏಪ್ರಿಲ್ 19 ರಿಂದ ಅರ್ಜಿ ಸಲ್ಲಿಕೆ ಪ್ರಾರಂಭವಾಗಲಿದ್ದು, ಮೇ 03 ಸಂಜೆ 5 ಅರ್ಜಿ ಸಲ್ಲಿಸಲು ಕೊನೆಯ ದಿನ. ಅಪೂರ್ಣಗೊಂಡ ಹಾಗೂ ಅವಧಿ ಮೀರಿ ಬಂದ ಅರ್ಜಿಗಳನ್ನು ಕಡ್ಡಾಯವಾಗಿ ತಿರಸ್ಕರಿಸಲಾಗುವುದು.

ಷರತ್ತು: 2025–26ನೇ ಸಾಲಿನ ಪ್ರತಿಷ್ಠಿತ ಶಾಲೆಗಳಿಗೆ ಪ್ರತಿಭಾವಂತ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳನ್ನು ಉಚಿತವಾಗಿ ಅರ್ಹತಾ ಪರೀಕ್ಷಾ ಮೂಲಕ ಆಯ್ಕೆ ಮಾಡಲಾಗುವುದು. 5ನೇ ತರಗತಿಯಲ್ಲಿ ಶೇ.60ಕ್ಕಿಂತ ಹೆಚ್ಚು ಅಂಕಗಳಿಸಿದ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಆಯ್ಕೆಗೊಂಡ ವಿದ್ಯಾರ್ಥಿಗಳನ್ನು ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಲ್ಲಿ ದಾಖಲು ಮಾಡಲಾಗುವುದು. 6ನೇ ತರಗತಿಗೆ ಮಾತ್ರ ಜಿಲ್ಲೆಗೆ ನಿಗಧಿ ಪಡಿಸಿರುವ ಗುರಿಗೆ ಅನುಗುಣವಾಗಿ ನಿಯಮಾನುಸಾರ ಪ್ರವೇಶ ಅವಕಾಶವನ್ನು ನೀಡಲಾಗುವುದು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಪರಿಶಿಷ್ಟ ವರ್ಗಕ್ಕೆ ಸೇರಿದವರಾಗಿದ್ದು, ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳ ಮಿತಿಯೊಳಗೆ ಇರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹಾಗೂ ದೃಢೀಕೃತ ಅಂಕಪಟ್ಟಿಯನ್ನು ಅರ್ಜಿ ಜೊತೆ ಕಡ್ಡಾಯವಾಗಿ ಸಲ್ಲಿಸುವುದು. ಮುಖ್ಯೋಪಾಧ್ಯಾಯರಿಂದ ಕಡ್ಡಾಯವಾಗಿ ಶೇಕಡವಾರು ನಮೂದಿಸಿದ ಅಂಕಪಟ್ಟಿಯನ್ನು ಮಾತ್ರ ಪರಿಗಣಿಸಲಾಗುವುದು, ಅಂಕಪಟ್ಟಿಯಲ್ಲಿ ಗ್ರೇಡ್ ಅನ್ನು ನಮೂದಿಸಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ವಿದ್ಯಾರ್ಥಿಗಳ ಶುಲ್ಕ ಮತ್ತು ನಿರ್ವಹಣಾ ವೆಚ್ಚವನ್ನು ಸರ್ಕಾರ ನಿಗಧಿ ಪಡಿಸಿದ ದರದಲ್ಲಿ ನೀಡಲಾಗುವುದು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಚಿತ್ರದುರ್ಗ ಜಿಲ್ಲೆ ವ್ಯಾಪ್ತಿಗೆ ಒಳಪಟ್ಟಿರಬೇಕು. ಪೋಷಕರು ಒಂದು ಬಾರಿ ಶಾಲೆಯನ್ನು ಆಯ್ಕೆಗೊಳಿಸಿದ ಮೇಲೆ ಅದೇ ಶಾಲೆಗೆ ದಾಖಲಾತಿ ಮಾಡಲಾಗುವುದು ಯಾವುದೇ ಕಾರಣಕ್ಕೂ ಶಾಲೆಯನ್ನು ಬದಲಾಯಿಸುವುದಿಲ್ಲ. , ಆಯ್ಕೆಯಾದ ವಿದ್ಯಾರ್ಥಿಯು ಆಯ್ಕೆಯಾದ ಶಾಲೆಯಲ್ಲಿ ಯಾವ ಪಠ್ಯಕ್ರಮ ಇರುತ್ತದೆಯೋ ಅದೇ ಪಠ್ಯಕ್ರಮದಲ್ಲಿ ವಿದ್ಯಾಬ್ಯಾಸ ಮಾಡುವುದು. ಈ ಷರತ್ತಿನಲ್ಲಿ ಯಾವುದೇ ಬದಲಾವಣೆ ಮಾಡಲಾಗುವುದಿಲ್ಲ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

### ಸಿಇಟಿ ಪರೀಕ್ಷೆ ಮುಕ್ತಾಯ

» ಚಿತ್ರದುರ್ಗ

ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಗುರುವಾರ ಗಣಿತ ಹಾಗೂ ಜೀವಶಾಸ್ತ್ರ ವಿಷಯಗಳಿಗೆ ನಡೆಸಿದ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಸುಗಮವಾಗಿ ಜರುಗಿದೆ. ಎರಡು ದಿನಗಳ ಕಾಲ ಜರುಗಿದ ಸಿಇಟಿ ಪರೀಕ್ಷೆ ಯಾವುದೇ ಗೊಂದಲವಿಲ್ಲದೇ ಮುಕ್ತಾಯವಾಗಿದೆ. ವಿದ್ಯಾರ್ಥಿಗಳು ಬೆಳಿಗ್ಗೆ 10.30 ರಿಂದ 11.50 ರವರೆಗೆ ಗಣಿತಶಾಸ್ತ್ರ, ಮಧ್ಯಾಹ್ನ 2.30 ರಿಂದ 3.50 ರವರೆಗೆ ಜೀವಶಾಸ್ತ್ರ ವಿಷಯದ ಪರೀಕ್ಷೆ ಬರೆದರು. ಗಣಿತ ಪರೀಕ್ಷೆಗೆ ನೋಂದಣಿಯಾದ 6745 ವಿದ್ಯಾರ್ಥಿಗಳ ಪೈಕಿ 6445 ವಿದ್ಯಾರ್ಥಿಗಳು ಹಾಜರಾಗಿ, 300 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಜೀವಶಾಸ್ತ್ರ ಪರೀಕ್ಷೆಗೆ ನೋಂದಣಿಯಾದ 6123 ವಿದ್ಯಾರ್ಥಿಗಳ ಪೈಕಿ 5760 ವಿದ್ಯಾರ್ಥಿಗಳು ಹಾಜರಾಗಿ, 363 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಚಿತ್ರದುರ್ಗ ನಗರದ 16 ಪರೀಕ್ಷಾ ಕೇಂದ್ರಗಳಲ್ಲಿ ಸಿಇಟಿ ಪರೀಕ್ಷೆ ಯಾವುದೇ ಗೊಂದಲವಿಲ್ಲದೆ ಸುಗಮವಾಗಿ ನಡೆಯಿತು.

ತುಮಕೂರು, ದಾವಣಗೆರೆ, ಚಿತ್ರದುರ್ಗ ಮತ್ತು ಶಿವಮೊಗ್ಗ ಜಿಲ್ಲೆಗಳ ಜನಪ್ರತಿನಿಧಿಗಳ ಭಾಗಿ

# ಪ್ರಾದೇಶಿಕ ಅಸಮತೋಲನ ನಿವಾರಣ ಸಭೆ

## ವ್ಯವಸ್ಥಿತವಾಗಿ ಸಂವಾದ ಸಭೆಗೆ ಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಿ.ಸಿ ವೆಂಕಟೇಶ್ ಸೂಚನೆ



» ಚಿತ್ರದುರ್ಗ

ಚಿತ್ರದುರ್ಗದಲ್ಲಿ ಪ್ರೊ. ಎಂ. ಗೋವಿಂದರಾವ್ ಅಧ್ಯಕ್ಷತೆಯ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಬೆಂಗಳೂರು ವಿಭಾಗ ಮಟ್ಟದ ಸಂವಾದ ಸಭೆ ಏ. 28 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದು, ಸಭೆಯಲ್ಲಿ ತುಮಕೂರು, ದಾವಣಗೆರೆ, ಚಿತ್ರದುರ್ಗ ಮತ್ತು ಶಿವಮೊಗ್ಗ ಜಿಲ್ಲೆಗಳ ಜನಪ್ರತಿನಿಧಿಗಳು, ಅಧಿಕಾರಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸುವರು. ಹೀಗಾಗಿ ಈ ಸಂವಾದ ಸಭೆಯನ್ನು ವ್ಯವಸ್ಥಿತವಾಗಿ ಕೈಗೊಳ್ಳಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಬೆಂಗಳೂರು ವಿಭಾಗ ಮಟ್ಟದ ಸಂವಾದ ಸಭೆಯನ್ನು ಚಿತ್ರದುರ್ಗ ಜಿಲ್ಲೆಯಲ್ಲಿ ಏರ್ಪಡಿಸುವ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಡಾ.ಡಿ.ಎಂ.ನಂಜುಂಡಪ್ಪ ವರದಿಯು ಸುಮಾರು 22 ವರ್ಷಗಳಷ್ಟು ಹಳೆಯದಾಗಿದ್ದು, ಆ ಸಂದರ್ಭದಲ್ಲಿ ಇದ್ದಂತಹ 175 ತಾಲ್ಲೂಕುಗಳ ಸಂಖ್ಯೆ ಈಗ 240 ಆಗಿದೆ. ಹೀಗಾಗಿ ಕಳೆದ 2023 ರ ಬೆಳಗಾವಿ ಅಧಿವೇಶನದಲ್ಲಿ ಮುಖ್ಯಮಂತ್ರಿಗಳು ಘೋಷಿಸಿದಂತೆ, ಡಾ. ಡಿ.ಎಂ. ನಂಜುಂಡಪ್ಪ ವರದಿಯ ಅನುಷ್ಠಾನದಿಂದ ತಾಲ್ಲೂಕುಗಳಲ್ಲಿ ಅಭಿವೃದ್ಧಿ ಹೊಂದಿರುವ ಹಾಗೂ ಅಭಿವೃದ್ಧಿ ಹೊಂದದಿರುವ ಬಗ್ಗೆ ಗುರುತಿಸಿ, ಹೊಸದಾಗಿ ಸೂಚ್ಯಂಕವನ್ನು ಕಂಡು ಹಿಡಿದು ಪ್ರಾದೇಶಿಕ ಅಸಮತೋಲನವನ್ನು ನಿವಾರಣೆ ಮಾಡಲು ರಾಜ್ಯ ಸರ್ಕಾರವು ಆರ್ಥಿಕ ತಜ್ಞ ಪ್ರೊ. ಎಂ. ಗೋವಿಂದರಾವ್ ಅವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯನ್ನು ರಚಿಸಿದ್ದು, ಸಮಿತಿಯ ತೀರ್ಮಾನದಂತೆ ಜಿಲ್ಲಾ ಹಂತದಲ್ಲಿ ಕ್ಷೇತ್ರ ಭೇಟಿಗಳನ್ನು ಹಮ್ಮಿಕೊಂಡು ಪ್ರಾಥಮಿಕ ಮಾಹಿತಿ ಕಲೆ ಹಾಕಲು ಸಭೆಗಳನ್ನು ಏರ್ಪಡಿಸಿ, ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳು, ಉದ್ದಿಮೆದಾರರು, ವರ್ತಕರು ಮತ್ತು ಸಾರ್ವಜನಿಕರಿಂದ ಮನವಿ, ಅಭಿಪ್ರಾಯ ಹಾಗೂ ಸಲಹೆಗಳನ್ನು ಪಡೆಯಲು ಮುಂದಾಗಿದೆ. ಈ ನಿಟ್ಟಿನಲ್ಲಿ ಬೆಂಗಳೂರು ವಿಭಾಗದಲ್ಲಿ ಬರುವ ತುಮಕೂರು, ದಾವಣಗೆರೆ, ಚಿತ್ರದುರ್ಗ ಮತ್ತು ಶಿವಮೊಗ್ಗ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಮಾಹಿತಿ ಪಡೆಯಲು ಸಂವಾದ ಸಭೆಯನ್ನು ಬರುವ ಏ. 28 ರಂದು ಚಿತ್ರದುರ್ಗದಲ್ಲಿ ನಡೆಸಲಿದೆ. ಹೀಗಾಗಿ ಈ ಸಭೆಗೆ ನಾಲ್ಕೂ ಜಿಲ್ಲೆಗಳ ಲೋಕಸಭೆ, ರಾಜ್ಯಸಭೆ ಸದಸ್ಯರು, ವಿಧಾನಸಭೆ, ವಿಧಾನಪರಿಷತ್ ಸದಸ್ಯರು, ಉನ್ನತ ಅಧಿಕಾರಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಚೇಂಬರ್ ಆಫ್ ಕಾಮರ್ಸ್‌ನವರು ಮುಂತಾದವರು ಜಿಲ್ಲೆಗೆ ಆಗಮಿಸಲಿದ್ದಾರೆ. ರಾಜ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರ ಇಲಾಖೆಗೆ ಸಂಬಂಧಿಸಿದ ಕಾರ್ಯಕ್ರಮ ಇದಾಗಿದ್ದು, ಹೀಗಾಗಿ ಎಲ್ಲ ಜನಪ್ರತಿನಿಧಿಗಳು, ಉನ್ನತ ಅಧಿಕಾರಿಗಳು, ಸಂಘ ಸಂಸ್ಥೆಗಳನ್ನು ಜಿಲ್ಲೆಗೆ ಗೌರವಯುತವಾಗಿ ಬರಮಾಡಿಕೊಂಡು, ಅವರಿಗೆ ಉತ್ತಮ ವ್ಯವಸ್ಥೆ ಕಲ್ಪಿಸಿಕೊಡಬೇಕಿದೆ. ಈ ನಿಟ್ಟಿನಲ್ಲಿ ಪ್ರತಿ ಜಿಲ್ಲೆಗೂ ಪ್ರತ್ಯೇಕವಾಗಿ ಜಿಲ್ಲಾ ಮಟ್ಟದ ಅಧಿಕಾರಿಯನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗುವುದು. ಈ ಅಧಿಕಾರಿಗಳು ಆಯಾ ಜಿಲ್ಲೆಯ ಜಿಲ್ಲಾಡಳಿತದೊಂದಿಗೆ ಸಮನ್ವಯ ಸಾಧಿಸಿಕೊಂಡು, ಜನಪ್ರತಿನಿಧಿಗಳು, ಉನ್ನತ ಅಧಿಕಾರಿಗಳು, ಸಂಘ ಸಂಸ್ಥೆಗಳ ಬರುವಿಕೆ ಬಗ್ಗೆ ಮಾಹಿತಿ ಸಂಗ್ರಹಿಸಬೇಕು, ಹಾಗೂ ಅವರ ವಾಸ್ತವ್ಯಕ್ಕೆ ಸೂಕ್ತ ವ್ಯವಸ್ಥೆ ಕಲ್ಪಿಸಲು ಕ್ರಮ ವಹಿಸಬೇಕು. ವಹಿಸಲಾಗುವ ಜವಾಬ್ದಾರಿಯನ್ನು ಆಯಾ ಅಧಿಕಾರಿಗಳು ಸಮರ್ಪಕವಾಗಿ ನಿರ್ವಹಿಸಿ, ಯಾವುದೇ ಕೊರತೆ ಆಗದ ರೀತಿ ಸಿದ್ಧತೆ ಮಾಡಿಕೊಳ್ಳಬೇಕು, ಶಿಷ್ಟಾಚಾರ ಪಾಲನೆಯಲ್ಲಿ ಯಾವುದೇ ಲೋಪದೋಷಗಳು ಆಗಬಾರದು ಎಂದು ಸೂಚನೆ ನೀಡಿದರು.

ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯು ಪ್ರಮುಖವಾಗಿ ಆಯಾ ಜಿಲ್ಲೆಯಲ್ಲಿ ತಾಲ್ಲೂಕುವಾರು ಅಭಿವೃದ್ಧಿ ಕುರಿತಂತೆ ಅಂಕಿ–ಅಂಶ ಸಂಗ್ರಹಣೆಗೆ ಹೆಚ್ಚು ಒತ್ತು ನೀಡುವುದರಿಂದ, ಸಂಬಂಧಿಸಿದ ಅಧಿಕಾರಿಗಳು ಆಯಾ ತಾಲ್ಲೂಕು ವ್ಯಾಪ್ತಿಯಲ್ಲಿನ ಹಾಗೂ ಜಿಲ್ಲಾ ಮಟ್ಟದಲ್ಲಿನ ಜನಸಂಖ್ಯೆ, ಸಾಕ್ಷರತೆ ಪ್ರಮಾಣ, ಎಸ್‌ಸಿಪಿ/ಟಿಎಸ್‌ಪಿ ಯೋಜನೆಗಳ ಅನುಷ್ಠಾನ, ಅನುದಾನ ಹಂಚಿಕೆ, ಅನುದಾನ ಖರ್ಚು–ವೆಚ್ಚಗಳ ವಿವರ, ಆರೋಗ್ಯ ಸೂಚ್ಯಂಕ, ವಿವಿಧ ಯೋಜನೆಗಳ ಅನುಷ್ಠಾನ ಕುರಿತು ಸೇರಿದಂತೆ ಸಮಗ್ರ ವಿವರವನ್ನು ಸಂಗ್ರಹಿಸಿ, ಪಿಪಿಟಿ ಮೂಲಕ ಮಾಹಿತಿಯನ್ನು ಸಭೆಗೆ ಒದಗಿಸುವಂತಾಗಬೇಕು. ಚಿತ್ರದುರ್ಗ ಜಿಲ್ಲೆಯೂ ಸೇರಿದಂತೆ ಎಲ್ಲ 04 ಜಿಲ್ಲೆಗಳ ಅಂಕಿ–ಅಂಶಗಳನ್ನು ಆಯಾ ಜಿಲ್ಲಾಡಳಿತದಿಂದ ಸಂಗ್ರಹಿಸಿ, ಪಿಪಿಟಿ ವರದಿ ಸಿದ್ಧಪಡಿಸಿಕೊಂಡು, ಸಮಿತಿ ಸಭೆಯಲ್ಲಿ ಕೇಳಲಾಗುವ ಎಲ್ಲ ಮಾಹಿತಿಯೂ ಒಂದೆಡೆ ದೊರೆಯುವ ರೀತಿ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಜಿ.ಪಂ. ಮುಖ್ಯ ಯೋಜನಾಧಿಕಾರಿ ಗಾಯತ್ರಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಚೇಂಬರ್ ಆಫ್ ಕಾಮರ್ಸ್‌ನ ಪದಾಧಿಕಾರಿಗಳು ಉಪಸ್ಥಿತರಿದ್ದರು.


## ಪ್ರಮುಖ ಸುದ್ದಿ

ದಿಢೀರ್ ಬೀಸಿದ ಬಿರುಗಾಳಿಗೆ ಜಮೀನಿನಲ್ಲಿದ್ದ ಪಪ್ಪಾಯಿ, ಬಾಳೆ, ಅಡಿಕೆ ಗಿಡಗಳು ನೆಲಸಮ

# ಚಳ್ಳಕೆರೆ: ಹೊತ್ತಿ ಉರಿದ ತೆಂಗಿನ ಮರ; ಮನೆಗಳ ಮೇಲ್ಛಾವಣಿ ಹಾರಿ ಹೋಗಿ ಲಕ್ಷಾಂತರ ರೂ ನಷ್ಟ













» ಚಳ್ಳಕೆರೆ

ತಾಲ್ಲೂಕಿನಾದ್ಯಂತ ಈಗಾಗಲೇ ಅಶ್ವಿನಿ ಮಳೆ ಆರಂಭವಾಗಿ ಪ್ರಾರಂಭದ ಎರಡು ದಿನ ಅಲ್ಪಪ್ರಮಾಣದ ಮಳೆಯಾಗಿದ್ದರೂ ಸಾಕಷ್ಟು ಬೆಳೆ ಹಾನಿಯಾಗಿತ್ತು. ಇದರ ಬೆನ್ನಹಿಂದೆಯೇ ಏ.16ರ ಬುಧವಾರ ಸಂಜೆ 6ರಿಂದ 9ರ ಅವಧಿಯಲ್ಲಿ ಬೀಸಿದ ಬಿರುಗಾಳಿಗೆ ಅಪಾರಪ್ರಮಾಣದ ಹಾನಿ ಸಂಭವಿಸಿದೆ.

ನಗರದ ಹೌಸಿಂಗ್‌ಬೋರ್ಡ್ ಕಾಲೋನಿ ವಾರ್ಡ್ ನಂ,12ರ ಪೊಲೀಸ್ ಕ್ವಾಟ್ರಸ್ ಬಳಿ ಮರವೊಂದು ರಸ್ತೆಗೆ ಅಡ್ಡಲಾಗಿ ಕಾರಿನ ಮೇಲೆ ಉರುಳಿಬಿದ್ದು ಕಾರುಜಖಂಗೊಂಡಿದೆ. ಹೌಸಿಂಗ್ ಬೋರ್ಡ್ ಕಾಲೋನಿಯ ಮನೆ ಮುಂದಿನ ಚನ್ನಕೇಶವಮರ ಗಾಳಿಗೆ ನೆಲಕ್ಕುರುಳಿದ್ದು ಯಾವುದೇ ಪ್ರಾಣಾಹಾನಿಯಾಗಿಲ್ಲ. ಸೂಜಿಮಲ್ಲೇಶ್ವರ ನಗರದಲ್ಲಿ ಬೀಸಿದ ಗಾಳಿಗೆ ತೆಂಗಿನ ಮರಕ್ಕೆ ಬೆಂಕಿಹೊತ್ತಿಕೊಂಡು ಹೊತ್ತಿ ಉರಿದಿದೆ.

ತಾಲ್ಲೂಕಿನ ದೊಡ್ಡ ಉಳ್ಳಾರ್ತಿ ಗ್ರಾಮದ ಕರಿಯಣ್ಣ ಎಂಬುವವರ ರಿ.ಸರ್ವೆ ನಂ, 55/6 ಮತ್ತು 55/7 ಸುಮಾರು ಮೂರು ಎಕರೆ ಪ್ರದೇಶದಲ್ಲಿದ್ದ ಫಸಲಿಗೆ ಬಂದ ಪುಟ್ಟಬಾಳೆ ಹೊತ್ತ ಗಿಡಗಳು ಗಾಳಿಗೆ ನೆಕ್ಕುಳಿವೆ. ಇದರ ಜೊತೆಯಲ್ಲೇ ಜಮೀನಿನಲ್ಲಿದ್ದ ಅಡಿಕೆ, ತೆಂಗಿಗೆ ಮರಗಳಿಗೂ ಹಾನಿಯಾಗಿ ಸುಮಾರು 3ಲಕ್ಷಕ್ಕೂ ಹೆಚ್ಚು ನಷ್ಟ ಸಂಭವಿಸಿದೆ.

ತಾಲ್ಲೂಕಿನ ಚಿತ್ರನಾಯನಹಳ್ಳಿಯ ಚನ್ನಗಾಲರೆಡ್ಡಿಯವರ ಜಮೀನಿನಲ್ಲಿದ್ದ ಪಪ್ಪಾಯಿ ಗಿಡಗಳು ಗಾಳಿಗೆ ನೆಲಕಚ್ಚಿ ಸುಮಾರು ಲಕ್ಷಾಂತರರೂಪಾಯಿ ನಷ್ಟ ಸಂಭವಿಸಿದೆ. ತಾಲ್ಲೂಕಿನ ತಳಕು ಹೋಬಳಿ ಕೋಡಿಹಳ್ಳಿ ಗ್ರಾಮದಲ್ಲಿ ದುರುಗಮ್ಮ ಎಂಬುವವರ ಮನೆಯ ಮೇಲೆ ಮರಬಿದ್ದು ಸುಮಾರು 30ಸಾವಿರಕ್ಕೂ ಹೆಚ್ಚು ನಷ್ಟ ಸಂಭವಿಸಿದೆ. ಗೌರಸಮುದ್ರ ಗ್ರಾಮದ ಮಾರಣ್ಣ ಎಂಬುವವರ ಜಮೀನಿನಲ್ಲಿದ್ದ ಒಂದು ಎಕರೆ ಪ್ರದೇಶದ ಬಾಳೆಗಿಡಗಳು ಗಾಳಿಗೆ ಮುರಿದುಬಿದ್ದು 20 ಸಾವಿರ ನಷ್ಟಸಂಭವಿಸಿದೆ. ಇದೇ ಗ್ರಾಮದ ಮುಖ್ಯರಸ್ತೆಯಲ್ಲಿರುವ ಮಾತಂಗಮ್ಮ ದೇವಸ್ಥಾನದ ಮುಂದೆ ಇದ್ದ ಹಳೇಕಾಲದ ಬೇವಿನ ಮರವೊಂದು ಗಾಳಿಗೆ ಉರುಳಿಬಿದ್ದಿದೆ. ಗ್ರಾಮದ ಚನ್ನಕ್ಕ ಎಂಬುವವರ ಮನೆ ಮೇಲ್ಛಾವಣಿ ಗಾಳಿಗೆ ಹಾರಿದ್ದು 25 ಸಾವಿರ, ಮಾಣಿಕ್ಯಮ್ಮ ಎಂಬುವವರ ಮನೆಯ ತಗಡುಗಳು ಹಾದಿಹೋಗಿ 40 ಸಾವಿರ, ದುರುಗಮ್ಮ ಎಂಬುವವರ ಮನೆಯ ಗೋಡೆ ಕುಸಿದು 40 ಸಾವಿರ, ಬಿ.ಒ.ಹನುಮಕ್ಕನವರ ಮನೆಯ ಮೇಲ್ಛಾವಣಿಯ ಕಡಬಬಂಡೆ ಕುಸಿದು ಬಿದ್ದು 25ಸಾವಿರ, ಕದರಮ್ಮ ಎಂಬುವವರ ಮನೆಯ ಶೀಟ್ ಹಾರಿಹೋಗಿ 25 ಸಾವಿರ ನಷ್ಟ ಸಂಭವಿಸಿದೆ. ಕಾಟಂದೇವರಕೋಟೆ ಗ್ರಾಮದ ಈರಣ್ಣ ಎಂಬುವವರ ಜಮೀನಿನಲ್ಲಿದ್ದ ಮೆಕ್ಕೆಜೋಳ ಮತ್ತು ಭತ್ತ ಗಾಳಿಗೆ ನೆಲಕಚ್ಚಿ ಸುಮಾರು 20 ಸಾವಿರ ನಷ್ಟ ಸಂಭವಿಸಿದೆ.

## ಫಾಸ್ಟ್ ನ್ಯೂಸ್

### ಸೈಯದ್‌ಗೆ ಪಿಎಚ್‌ಡಿ

» ಚಿತ್ರದುರ್ಗ



ಹಿರೆಕಬ್ಬಿಗೆರೆ ಗ್ರಾಮದ ಸೈಯದ್ ಬಿ. ಇವರಿಗೆ ಹಂಪಿ ಕನ್ನಡ ವಿಶ್ವವಿದ್ಯಾನಿಲಯದ 33 ನೇ ಘಟಿಕೋತ್ಸವದಲ್ಲಿ ಪಿ.ಎಚ್.ಡಿ.ಪದವಿ ನೀಡಿ ಗೌರವಿ ಸಲಾಗಿದೆ. ಕನ್ನಡಾನುವಾದಿತ ಉರ್ದು ಕಥನ ಸಾಹಿತ್ಯದಲ್ಲಿ ಸಾಮಾಜಿಕ ಸಂವೇದನೆ ಎಂಬ ಮಹಾ ಪ್ರಬಂಧಕ್ಕೆ ಗ್ರಾಮೀಣ ಪ್ರತಿಭೆ ಸೈಯದ್ ಬಿ.ರವರಿಗೆ ಪಿ.ಎಚ್.ಡಿ. ಪದವಿ ಸಿಕ್ಕಿದೆ. ಹಂಪಿ ಕನ್ನಡ ವಿಶ್ವವಿದ್ಯಾನಿಲಯದ ಭಾಷಾಂತರ ಅಧ್ಯಯನ ವಿಭಾಗದ ನಿವೃತ್ತ ಪ್ರಾಧ್ಯಾಪಕರಾದ ಡಾ.ವಿಠಲರಾವ್ ಟಿ. ಗಾಯಕ್ವಾಡ್ ಮಾರ್ಗದರ್ಶನದಲ್ಲಿ ಸೈಯದ್ ಬಿ.ಪ್ರಬಂಧ ಮಂಡಿಸಿದ್ದರು.

### ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಪಂಗಡ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ಹಾಗೂ ತರಬೇತಿ ಪಡೆದ ಅರ್ಹ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಟೀನ್ ಸಹಾಯಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಯನ್ನು ಹೊಂದಿರಬೇಕು. 45 ವರ್ಷ ವಯೋಮಾನದೊಳಗಿರಬೇಕು. ಅರ್ಜಿ ಸಲ್ಲಿಸಲು ಏಪ್ರಿಲ್ 22 ಕೊನೆಯದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ದಾವಣಗೆರೆ ದೂ.ಸಂ:08192-230123 ನ್ನು ಸಂಪರ್ಕಿಸಲು ಇಲಾಖೆಯ ಸಹಾಯಕ ನಿರ್ದೇಶಕರಾದ ಕಾವ್ಯ ತಿಳಿಸಿದ್ದಾರೆ.

### ಪ್ರಾಂಶುಪಾಲರ ಹುದ್ದೆಗೆ ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕ ರಾಜ್ಯ ಪೊಲೀಸ್ ವೆಲ್‌ಫೇರ್ ಅಂಡ್ ಎಜುಕೇಷನ್ ಟ್ರಸ್ಟ್ ದಾವಣಗೆರೆ ರೇಂಜ್ ಅಡಿಯಲ್ಲಿನ ಹರಿಹರ ತಾಲ್ಲೂಕು ಕೊಂಡಜ್ಜಿಯ ಪಬ್ಲಿಕ್ ಶಾಲೆಯಲ್ಲಿನ ಪ್ರಾಂಶುಪಾಲರ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಸ್ನಾತಕೋತ್ತರ ಪದವಿ ಹಾಗೂ ಬಿ.ಎಡ್ ಪದವಿ ಹೊಂದಿರಬೇಕು. ಕನಿಷ್ಠ 3 ವರ್ಷದ ಅನುಭವ ಇರುವವರಿಗೆ ಆದ್ಯತೆ ನೀಡಲಾಗುವುದು. ಅರ್ಜಿ ಸಲ್ಲಿಸಲು ಏಪ್ರಿಲ್ 23 ರೊಳಗಾಗಿ ಇ-ಮೇಲ್ ppschooldvg@gmail.com ವಿಳಾಸಕ್ಕೆ ಕಳುಹಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:9480803206, 9743936234 ನ್ನು ಸಂಪರ್ಕಿಸಲು ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ತಿಳಿಸಿದ್ದಾರೆ.

### 6ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ

» ದಾವಣಗೆರೆ

ಪ್ರಸಕ್ತ ಸಾಲಿಗೆ ಪ್ರತಿಭಾನ್ವಿತ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳನ್ನು ಪ್ರತಿಷ್ಠಿತ ಶಾಲೆಗಳಿಗೆ 6 ನೇ ತರಗತಿಗೆ ಅರ್ಹತಾ ಪರೀಕ್ಷೆಯ ಮೂಲಕ ಆಯ್ಕೆ ಮಾಡಲು ದಾವಣಗೆರೆ ಜಿಲ್ಲೆ ವ್ಯಾಪ್ತಿಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ.3 ರೊಳಗಾಗಿ ವೆಬ್‌ಸೈಟ್ https://swd.karnataka.gov.in ನಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ದಾವಣಗೆರೆ ಹಾಗೂ ಸಂಬಂಧಿಸಿದ ತಾಲ್ಲೂಕುಗಳ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಇವರನ್ನು ಸಂಪರ್ಕಿಸಲು ಇಲಾಖೆಯ ಜಂಟಿ ನಿರ್ದೇಶಕರಾದ ಕೆ.ನಾಗರಾಜ ತಿಳಿಸಿದ್ದಾರೆ.

### ಮೌಲಾನಾ ಅಜಾದ್ ಮಾದರಿ ಶಾಲೆಗೆ 6ನೇ ತರಗತಿಗೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

» ದಾವಣಗೆರೆ

ದಾವಣಗೆರೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ 6ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಈ ಶಾಲೆಗಳಲ್ಲಿ ಅಲ್ಪಸಂಖ್ಯಾತ ವರ್ಗದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ, ಪಾರ್ಸಿ ವಿದ್ಯಾರ್ಥಿಗಳಿಗೆ ಶೇ.75%ರಷ್ಟು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಶೇ.25%ರಷ್ಟು ಪ್ರವೇಶಕ್ಕಾಗಿ ಲಭ್ಯವಿರುತ್ತದೆ. ಮತ್ತು ಶೇ.50% ರಷ್ಟು ಹೆಣ್ಣು ಮಕ್ಕಳಿಗೆ ಸ್ಥಾನಗಳನ್ನು ಮೀಸಲಿರಿಸಲಾಗಿದೆ. ಅಲ್ಪಸಂಖ್ಯಾತರ ಅಭ್ಯರ್ಥಿಗಳು ಮೇ.10 ರೊಳಗಾಗಿ ಸೇವಾ ಸಿಂಧು ಪೋರ್ಟಲ್ ವೆಬ್ ಸೈಟ್ https://sevasindhu services.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು.

---

**ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ**

# ಅಪಘಾತ ನಿಯಂತ್ರಣಕ್ಕೆ ಶ್ರಮಿಸಬೇಕು

» ಚಿತ್ರದುರ್ಗ



ಜಿಲ್ಲೆಯಲ್ಲಿ ಸಂಭವಿಸುತ್ತಿರುವ ಅಪಘಾತ ಪ್ರಕರಣಗಳನ್ನು ತಡೆಗಟ್ಟಲು ಹಾಗೂ ರಸ್ತೆ ಸುರಕ್ಷತೆ ಹೆಚ್ಚಿಸಲು ವಿವಿಧ ಇಲಾಖೆಗಳು ಕೈಜೋಡಿಸುವ ಮೂಲಕ ಅಪಘಾತ ನಿಯಂತ್ರಣಕ್ಕೆ ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ, ಜಿಲ್ಲಾ ಹೆದ್ದಾರಿಗಳಲ್ಲಿ ಈ ಹಿಂದೆ ಕಪ್ಪುಚುಕ್ಕೆ ವಲಯಗಳನ್ನು ಗುರುತಿಸಿ, ಅಪಘಾತ ತಡೆಗಾಗಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸೂಚನೆಗಳನ್ನು ನೀಡಲಾಗಿತ್ತು. ಈ ಹಿನ್ನೆಲೆಯಲ್ಲಿ ಅಪಘಾತ ಪ್ರಕರಣಗಳ ಸಂಖ್ಯೆ ಇಳಿಕೆಗೆ ಕೈಗೊಂಡಿರುವ ಕ್ರಮಗಳೇನು? ರಸ್ತೆ ಸುರಕ್ಷತೆಗಾಗಿ ಕ್ರಮ ಕೈಗೊಂಡಿದ್ದಲ್ಲಿ ಅಪಘಾತಗಳ ಸಂಖ್ಯೆ ಇಳಿಕೆಯಾಗಿದೆಯೇ, ಇಲ್ಲವೇ ಎಂಬುವುದರ ಕುರಿತು ವಿಶ್ಲೇಷಣಾ ವರದಿ ಸಲ್ಲಿಸಬೇಕು ಎಂದು ತಿಳಿಸಿದ ಅವರು, ಈಗಾಗಲೇ ಹಂಪ್ಸ್, ರಂಬಲ್ಸ್, ಸೂಚನಾ ಫಲಕಗಳನ್ನು ಹಾಕಿರುವ ಕಡೆ ಅಪಘಾತಗಳ ಸಂಖ್ಯೆ ಇಳಿಕೆ ಆಗಿದೆಯೇ ಎಂಬ ಕುರಿತು ವಿಶ್ಲೇಷಣಾತ್ಮಕ ವರದಿ ನೀಡಬೇಕು ಎಂದು ತಿಳಿಸಿದರು.

**ಚಳ್ಳಕೆರೆ ಗೇಟ್ ಬಸ್ ತಂಗುದಾಣ ನಿರ್ಮಾಣಕ್ಕೆ ತಕ್ಷಣ ಕ್ರಮವಹಿಸಿ:** ಚಿತ್ರದುರ್ಗ ನಗರದ ಚಳ್ಳಕೆರೆ ಗೇಟ್ ಬಳಿಯ ಬಸ್ ತಂಗುದಾಣ ನಿರ್ಮಾಣಕ್ಕೆ ತಕ್ಷಣ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು. ಬಸ್ ತಂಗುದಾಣ ನಿರ್ಮಾಣಕ್ಕೆ ಎನ್‌ಓಸಿ ನೀಡಿ, ಆರು ತಿಂಗಳಾದರೂ ಕಾಮಗಾರಿ ಪ್ರಾರಂಭ ಮಾಡದಿದ್ದರೆ ಹೇಗೆ? ಎಂದು ಪ್ರಶ್ನಿಸಿದರು. ಚಳ್ಳಕೆರೆ ಗೇಟ್ ಬಳಿ ಹೊಸ ಮಾದರಿಯಲ್ಲಿ ತಂಗುದಾಣ ನಿರ್ಮಿಸಲು ಶಾಸಕರು ಅನುದಾನ ಒದಗಿಸಿದ್ದು, ಕೆಆರ್‌ಐಡಿಎಲ್‌ನಿಂದ ಈಗಾಗಲೇ ಟೆಂಡರ್ ಕರೆಯಲಾಗಿದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಕೂಡಲೇ ಕಾಮಗಾರಿ ಆರಂಭಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಚಳ್ಳಕೆರೆ ಗೇಟ್‌ನಲ್ಲಿ ಸಂಚಾರ ದಟ್ಟಣೆ ನಿಯಂತ್ರಣ ಮಾಡಬೇಕಿದೆ. ಚಳ್ಳಕೆರೆ ಗೇಟ್ ಬಳಿಯ ಅಂಡರ್‌ಪಾಸ್ ಕೆಳಗಡೆ ದ್ವಿಚಕ್ರ ವಾಹನಗಳನ್ನು ನಿಲ್ಲಿಸಲು ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು, ನಿಲ್ಲಿಸುವವರ ವಿರುದ್ಧ ಕ್ರಮ ಜರುಗಿಸಬೇಕು ಹಾಗೂ ಸುಗಮ ಸಂಚಾರಕ್ಕೆ ಕ್ರಮ ವಹಿಸಬೇಕು. ಈ ಭಾಗದ ನಾಲ್ಕು ಕಡೆಯೂ ಫುಟ್‌ಪಾತ್ ಅತಿಕ್ರಮಣ ತೆರವುಗೊಳಿಸಿ ವಾಹನಗಳ ಪಾರ್ಕಿಂಗ್‌ಗೆ ವ್ಯವಸ್ಥೆ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

**ಜೆಎಂಐಟಿ ಬಳಿ ಸ್ಕೈವಾಕ್:** ನಗರದ ಜೆಎಂಐಟಿ ಬಳಿ ವಿದ್ಯಾರ್ಥಿಗಳು ಹೆದ್ದಾರಿ ಇಕ್ಕೆಲಗಳ ಮೆಶ್ ಅನ್ನು ಡ್ಯಾಮೇಜ್ ಮಾಡಿ, ಆ ಮೂಲಕ ರಸ್ತೆ ದಾಟಿ ಓಡಾಡುತ್ತಿದ್ದಾರೆ. ಹಲವು ಬಾರಿ ಇಲ್ಲಿ ಅಪಘಾತಗಳಾಗುತ್ತಿವೆ. ಹಾಗಾಗಿ ಇಲ್ಲಿ ಸ್ಕೈವಾಕ್ ಅಗತ್ಯವಿದ್ದು, ಸ್ಕೈವಾಕ್‌ಗೆ ಅನುಮತಿ ನೀಡಬೇಕು ಎಂದು ಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಚಂದ್ರಪ್ಪ ಸಭೆಗೆ ಮಾಹಿತಿ ನೀಡಿದರು. ಜೆಎಂಐಟಿ ಬಳಿ ಸ್ಕೈವಾಕ್ ಅಗತ್ಯವಿದ್ದು, ಈ ತಿಂಗಳಲ್ಲಿಯೇ ಟೆಂಡರ್ ಪ್ರಕ್ರಿಯೆ ನಡೆಸಿ, ಕಾಮಗಾರಿ ಪ್ರಾರಂಭ ಮಾಡಬೇಕು. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳೊಂದಿಗೆ ಚರ್ಚಿಸಿ, ಕೆಳಗೋಟೆಯ ರಾಷ್ಟ್ರೀಯ ಹೆದ್ದಾರಿ ಬಳಿ ವೇಗ ಕಡಿತಗೊಳಿಸಲು ರಂಬಲ್ ಸ್ಟ್ರಿಪ್ಸ್, ಬ್ಲಿಂಕರ್ಸ್, ಲೈಟಿಂಗ್ ವ್ಯವಸ್ಥೆ ಮಾಡಬೇಕು. ಗಾಂಧಿ ವೃತ್ತದಿಂದ ಕೆಎಸ್‌ಆರ್‌ಟಿಸಿ ಮಾರ್ಗದ ರಸ್ತೆಯಲ್ಲಿ ಡಿವೈಡರ್ ತೆರವುಗೊಳಿಸಿದ ಬಳಿಕ ರಸ್ತೆಯನ್ನು ಸರಿಯಾದ ರೀತಿಯಲ್ಲಿ ದುರಸ್ತಿ ಮಾಡಿಲ್ಲ, ಕಬ್ಬಿಣದ ಸರಳುಗಳು ರಸ್ತೆಯ ಮೇಲೆಯೇ ಕಾಣುತ್ತಿದ್ದು, ಅಪಾಯಕಾರಿಯಾಗಿವೆ, ರಸ್ತೆ ಒಂದು ಕಡೆ ಎತ್ತರ, ಇನ್ನೊಂದೆಡೆ ತಗ್ಗಾಗಿದ್ದು, ವಾಹನ ಚಾಲನೆಗೆ ತೊಂದರೆಯಾಗಿ ಅಪಘಾತವಾಗುವ ಸಂಭವವಿದೆ. ಕೂಡಲೆ ನಗರದಲ್ಲಿ ಎಲ್ಲೆಲ್ಲಿ ಡಿವೈಡರ್‌ಗಳನ್ನು ತೆರವುಗೊಳಿಸಲಾಗಿದೆಯೇ ಅಲ್ಲಿ, ರಸ್ತೆ ಹಾಗೂ ಡಿವೈಡರ್ ಸರಿಪಡಿಸುವ ಕಾರ್ಯ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

**ನಗರದಲ್ಲಿ 27 ಕಡೆ ಆಟೋ ಪಾರ್ಕಿಂಗ್:** ಚಿತ್ರದುರ್ಗ ನಗರಸಭೆ ವತಿಯಿಂದ ನಗರದಲ್ಲಿ 27 ಕಡೆ ಆಟೋ ಪಾರ್ಕಿಂಗ್‌ಗಾಗಿ ಜಾಗ ಗುರುತಿಸಲಾಗಿದ್ದು, ಈಗಾಗಲೇ 12 ಆಟೋ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಉಳಿದಂತೆ ಇನ್ನೂ 15 ಆಟೋ ಪಾರ್ಕಿಂಗ್ ಬಾಕಿ ಇದೆ ಎಂದು ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ತಿಳಿಸಿದರು. ಚಿತ್ರದುರ್ಗ ನಗರದ ಗಾಂಧಿ ವೃತ್ತದಿಂದ ಪ್ರವಾಸಿ ಮಂದಿರ ಮಾರ್ಗದ ರಸ್ತೆಯ ಪಕ್ಕದಲ್ಲಿ ಆಟೋಗಳನ್ನು ಸಾಲಾಗಿ ನಿಲ್ಲಿಸುತ್ತಿದ್ದಾರೆ. ನಿಯಮಿತವಾಗಿ ತಪಾಸಣೆ ನಡೆಸಿ, ಆಟೋಗಳನ್ನು ನಿಲ್ಲಿಸದಂತೆ ಕ್ರಮವಹಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಸಂಚಾರಿ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು.

**ಗೂಡಂಗಡಿಗಳ ತೆರವುಗೊಳಿಸಲು ಸೂಚನೆ:** ಹಿರಿಯೂರು ನಗರದ ಒಳ ಬರುವ ಹಾಗೂ ಹೊರ ಬರುವ ರಾಷ್ಟ್ರೀಯ ಹೆದ್ದಾರಿ ರಸ್ತೆಯಲ್ಲಿ ಎಲ್ಲೆಂದರಲ್ಲಿ ಮಾರ್ಗ ಮಧ್ಯದಲ್ಲಿ ಬೃಹತ್ ವಾಹನಗಳು, ಲಾರಿಗಳು ಪಾರ್ಕಿಂಗ್ ಮಾಡುತ್ತಿದ್ದು, ಇದು ಅಪಾಯಕಾರಿ ವಲಯ ಆಗಿ ಮಾರ್ಪಟ್ಟಿದೆ. ಇಲ್ಲಿ ನಿಲ್ಲಿಸುವ ಲಾರಿಗಳಿಗೆ ದಂಡ ವಿಧಿಸಬೇಕು, ಇಲ್ಲಿ ಗೂಡಂಗಡಿಗಳ ಹಾವಳಿ ಹೆಚ್ಚಾಗಿದ್ದು, ಈ ಅಂಗಡಿಗಳು ಇರುವ ಭೂಮಿ ಕೃಷಿಯೇತರಕ್ಕೆ ಪರಿವರ್ತನೆ ಆಗಿಲ್ಲ, ಇಲ್ಲಿನ ಎಲ್ಲ ಅಂಗಡಿಗಳು ಅನಧಿಕೃತವಾಗಿದ್ದು, ನೋಟಿಸ್ ನೀಡಿ ಕೂಡಲೆ ತೆರವುಗೊಳಿಸಬೇಕು, ಹಾಗೂ ಇಲ್ಲಿನ ಅಂಗಡಿಗಳಿಗೆ ವಿದ್ಯುತ್ ಸಂಪರ್ಕವನ್ನು ತ್ವರಿತವಾಗಿ ಕಡಿತಗೊಳಿಸಬೇಕು ಎಂದು ಹಿರಿಯೂರು ಪೌರಾಯುಕ್ತ ವಾಸೀಂ ಅವರಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದರು. ಟ್ರಕ್ ಟರ್ಮಿನಲ್‌ಗೆ ಈಗಾಗಲೇ ಎರಡು ಕಡೆಗಳಲ್ಲಿ ಜಾಗ ಗುರುತಿಸಲಾಗಿದೆ. 15 ದಿನಗಳೊಳಗಾಗಿ ಹಿರಿಯೂರು ನಗರ ವ್ಯಾಪ್ತಿಯಲ್ಲಿ ಸಂಚಾರಿ ಸೂಚನಾ ಫಲಕಗಳನ್ನು ಅಳವಡಿಸಲು ಕ್ರಮವಹಿಸಲಾಗುವುದು ಎಂದು ಹಿರಿಯೂರು ನಗರಸಭೆ ಪೌರಾಯುಕ್ತ ವಾಸೀಂ ತಿಳಿಸಿದರು.

ಅಪಘಾತ ವಲಯ ಹಾಗೂ ರಾಷ್ಟ್ರೀಯ, ರಾಜ್ಯ ಹಾಗೂ ಜಿಲ್ಲಾ ರಸ್ತೆಗಳನ್ನು ಸಂಪರ್ಕಿಸುವ ರಸ್ತೆಗಳಲ್ಲಿ ಹಾಗೂ ಜಂಕ್ಷನ್ ರಸ್ತೆಗಳಲ್ಲಿ ಕ್ಯಾಟ್‌ಐಸ್ ಅಳವಡಿಕೆ, ಬ್ಲಿಂಕರ್ಸ್, ರಂಬಲ್ ಸ್ಟ್ರಿಪ್ಸ್, ಸೂಚನಾ ಫಲಕಗಳ ಅಳವಡಿಕೆ ಸೇರಿದಂತೆ ಅಗತ್ಯ ರಸ್ತೆ ಸುರಕ್ಷತಾ ಮುನ್ನೆಚ್ಚರಿಕೆ ಕ್ರಮಗಳನ್ನು ಕೂಡಲೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

**ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಿ :** ನಗರದ ಮುರುಘಾಮಠದಿಂದ ಕವಾಡಿಗರ ಹಟ್ಟಿ ಮಾರ್ಗ ಮೂಲಕ ಹೊಳಲ್ಕೆರೆ ರಸ್ತೆಗೆ ಸಂಪರ್ಕಿಸುವ ರಸ್ತೆಯನ್ನು ವಿಸ್ತರಿಸಿ ಅಭಿವೃದ್ಧಿಪಡಿಸುವ ಕಾಮಗಾರಿ ಹಲವು ವರ್ಷಗಳಿಂದಲೂ ನಡೆಯುತ್ತಲೇ ಇದೆ. ಈ ಮಾರ್ಗದಲ್ಲಿ ಕವಾಡಿಗರ ಹಟ್ಟಿ ಬಳಿ, ಹಾಗೂ ಮುಂದಿನ ದಾರಿಯಲ್ಲಿ ರಸ್ತೆ ಗುಂಡಿ ಬಿದ್ದು ವಾಹನಗಳು ಅಪಘಾತಕ್ಕೆ ಒಳಗಾಗುತ್ತಿವೆ. ರಸ್ತೆ ಕಾಮಗಾರಿ ಇದುವರೆಗೂ ಪೂರ್ಣಗೊಂಡಿಲ್ಲ ಎಂದು ಜಿಲ್ಲಾಧಿಕಾರಿಗಳು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಅಧಿಕಾರಿಗಳು ಉತ್ತರಿಸಿ, ಮಹಾರಾಷ್ಟ್ರದ ಎಸ್.ಎಂ. ಔತಾಡೆ ಎಂಬುವವರು ಕಾಮಗಾರಿಯ ಗುತ್ತಿಗೆ ಪಡೆದಿದ್ದು, ಕಾಮಗಾರಿಯನ್ನು ತ್ವರಿತವಾಗಿ ಕೈಗೊಳ್ಳದೆ, ಅಸಡ್ಡೆ ತೋರುತ್ತಿದ್ದಾರೆ, ಹಲವು ಬಾರಿ ನೋಟಿಸ್ ನೀಡಿದರೂ ಉಪಯೋಗವಾಗಿಲ್ಲ ಎಂದರು. ಕೂಡಲೆ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರ್ಪಡೆಗೊಳಿಸಿ, ಉಳಿದ ಕಾಮಗಾರಿಯನ್ನು ಬೇರೆಯವರಿಗೆ ವಹಿಸಲು ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

**ಅಪ್ರಾಪ್ತರು ಟ್ರ್ಯಾಕ್ಟರ್ ಚಾಲನೆ ಮಾಡುವುದನ್ನು ತಪ್ಪಿಸಿ :** ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ ಬಂಡಾರು ಅವರು ಮಾತನಾಡಿ, ಜಿಲ್ಲೆಯಲ್ಲಿ ಟ್ರ್ಯಾಕ್ಟರ್ ಟ್ರ್ಯಾಲಿಗಳಿಗೆ, ಎತ್ತಿನಗಾಡಿಗಳಿಗೆ ರಿಫ್ಲೆಕ್ಟರ್ ಇಲ್ಲದ ಕಾರಣ ಪ್ರಮುಖ ರಸ್ತೆಗಳಲ್ಲಿ ರಾತ್ರಿ ವೇಳೆ ಅಪಘಾತಗಳು ಸಂಭವಿಸುತ್ತಿವೆ. ಆರ್‌ಟಿಒ ಅಧಿಕಾರಿಗಳು ಈ ಬಗ್ಗೆ ರಸ್ತೆಗಳಲ್ಲಿ ತಪಾಸಣೆ ನಡೆಸಿ, ಟ್ರ್ಯಾಕ್ಟರ್ ಟ್ರ್ಯಾಲಿ ಹಾಗೂ ಎತ್ತಿನ ಗಾಡಿಗಳಿಗೆ ರಿಫ್ಲೆಕ್ಟರ್ ಸ್ಟಿಕರ್‌ಗಳನ್ನು ಅಳವಡಿಸುವ ಕಾರ್ಯ ಆಗಬೇಕು. ಜಿಲ್ಲೆಯಲ್ಲಿ ಅಪ್ರಾಪ್ತ ಹುಡುಗರು, ವಾಹನ ಚಾಲನೆ ಪರವಾನಗಿ ಇಲ್ಲದವರು ಕೂಡ ಟ್ರ್ಯಾಕ್ಟರ್ ಚಾಲನೆ ಮಾಡುತ್ತಿರುವುದು ಕಂಡುಬರುತ್ತಿದ್ದು, ಈ ಬಗ್ಗೆ ಪೊಲೀಸರು ಹಾಗೂ ಆರ್‌ಟಿಒ ಅಧಿಕಾರಿಗಳು ನಿಗಾ ವಹಿಸಿ, ತಪ್ಪಿತಸ್ಥರ ಮೇಲೆ ದಂಡ ಹಾಗೂ ಕಾನೂನಾತ್ಮಕ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಚಂದ್ರಪ್ಪ, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ.ಕಾಳೇಸಿಂಘೆ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಜಿ.ಪಿ. ರೇಣುಪ್ರಸಾದ್ ಸೇರಿದಂತೆ ರಾಷ್ಟ್ರೀಯ ಪ್ರಾಧಿಕಾರದ ಅಧಿಕಾರಿಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

---

**ಡಾ.ಆರ್.ಎ.ದಯಾನಂದಮೂರ್ತಿಯವರ ಅಪರಿಮಿತ ಸಾಧನೆಗೆ ಸಂದ ಗೌರವ**

# ರಿಯಾಲಿಟಿಬುಕ್ ಆಫ್ ವರ್ಲ್ಡ್ ರೇಕಾರ್ಡ್ ಪ್ರಶಸ್ತಿ

» ಚಳ್ಳಕೆರೆ

ಕ್ರೀಡಾಕ್ಷೇತ್ರ, ಸಾವಯವ ಗೊಬ್ಬರ ಸಿದ್ದತೆ, ಕೃಷಿ, ಪ್ರಾಣಿ, ಪಕ್ಷಿಗಳ ಸಾಕಾಣಿಕೆ, ಕಷ್ಟಕ್ಕೆ ಸಿಲುಕಿದವರಿಗೆ ನೆರವು, ವಿದ್ಯಾರ್ಥಿಗಳೂ ಸೇರಿದಂತೆ ಸಮಾಜದ ವಿವಿಧ ರಂಗಗಳಲ್ಲಿ ತೊಂದರೆಗೀಡಾದ ಜನರಿಗೆ ಸ್ವಯಂ ಪ್ರೇರಣೆಯಿಂದ ನೆರವು ನೀಡುತ್ತಿದ್ದ, ಇರುವ ಅಲ್ಪಜಮೀನಿನಲ್ಲೇ ವಿವಿಧ ರೀತಿಯ ಹಣ್ಣು, ತರಕಾರಿ, ಇತರೆ ಬೆಳೆ ಬೆಳೆದು ಕರ್ನಾಟಕವೂ ಸೇರಿದಂತೆ ರಾಜ್ಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಅನೇಕ ಬಹುಮಾನ ಪಡೆದ ಪ್ರಗತಿಪರ ರೈತ ಡಾ.ಆರ್.ಎ. ದಯಾನಂದಮೂರ್ತಿ ತಮ್ಮದೇಯಾದ ಪರಿಶ್ರಮದಿಂದ ರಿಯಾಲಿಟಿಬುಕ್ ಆಫ್ ವರ್ಲ್ಡ್ ರೇಕಾರ್ಡ್ ಪ್ರಶಸ್ತಿ ಪಡೆದಿರುವುದು ಹೆಮ್ಮೆಯ ವಿಷಯವೆಂದು ರೈತರು ಹಾಗೂ ನಿವೃತ್ತ ಪ್ರಾಂಶುಪಾಲ ಮೀರಸಾಬಿಹಳ್ಳಿ ಸಿ.ಶಿವಲಿಂಗಪ್ಪ ತಿಳಿಸಿದರು. ಅವರು, ಪ್ರವಾಸಿಮಂದಿರದಲ್ಲಿ ಬಹುಮುಖ ಪ್ರತಿಭೆ ದಯಾನಂದಮೂರ್ತಿಯವರನ್ನು ಅಭಿನಂದಿಸಿ ಮಾತನಾಡಿದರು.

ಡಾ.ಆರ್.ಎ.ದಯಾನಂದಮೂರ್ತಿಯವರನ್ನು ಕಳೆದ ಸುಮಾರು 20 ವರ್ಷಗಳಿಂದ ಅವರ ಎಲ್ಲಾ ಚಟುವಟಿಕೆಗಳನ್ನು ಸೂಕ್ಷ್ಮವಾಗಿ ಗಮನಿಸಿದ್ದೇನೆ. ಪ್ರತಿನಿತ್ಯವೂ ಚಳ್ಳಕೆರೆ ನಗರದಿಂದ ದೇವರಮರಿಕುಂಟೆ ಕಾವಲಿನ ಜಮೀನಿಗೆ ವ್ಯವಸಾಯಕ್ಕೆ ಸಂಬಂಧಪಟ್ಟ ಸಾಮಾಗ್ರಿಗಳನ್ನು ಬೈಕ್‌ನಲ್ಲೇ ಹೊತ್ತು ಸಾಗುತ್ತಾರೆ.

ಸಾವಯವ ಕೃಷಿಯಲ್ಲಿ ಬೆಳೆದ ಮಾವು, ನಿಂಬೆ, ಬಾಳೆ ಮುಂತಾದ ಪದಾರ್ಥಗಳನ್ನು ನಗರಕ್ಕೆ ಯಾರು ಬಯಸುತ್ತಾರೋ ಅವರ ಮನೆಗೆ ನೇರವಾಗಿ ನೀಡುತ್ತಾರೆ. ಅಮೇರಿಕವೂ ಸೇರಿದಂತೆ ಇತರೆ ದೇಶಗಳಿಗೆ ತೆರಳಿ ಕೃಷಿ ವಿಚಾರದಲ್ಲಿ ವಿವಿಧ ಪ್ರಶಸ್ತಿಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ವಿಶೇಷವಾಗಿ ಈ ಬಾರಿ ರಿಯಾಲಿಟಿ ಬುಕ್ ಆಫ್ ವರ್ಲ್ಡ್ ರೇಕಾರ್ಡ್‌ಗೆ ಭಾಜನಾಗಿರುವುದು ಸಂತಸ ತಂದಿದೆ ಎಂದರು. ಪ್ರಗತಿಪರ ಆರ್.ಎ.ದಯಾನಂದಮೂರ್ತಿ ಮಾತನಾಡಿ, ಏ.15ರ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ಕಾರ್ಯಕ್ರಮದಲ್ಲಿ ನಿವೃತ್ತ ಲೋಕಾಯುಕ್ತ ನ್ಯಾಯಮೂರ್ತಿ ಸಂತೋಷ್‌ಹೆಗ್ಗಡೆ, ನಿವೃತ್ತ ಸಹಾಯಕ ಪೊಲೀಸ್ ಕಮಿಷನರ್ ಎಸ್.ಬಿ.ಛಬ್ಬಿ, ಕರಾಟೆಶ್ರೀನಾಥ ನನಗೆ ಪಾರಿತೋಷಕ, ಬಹುಮಾನ ನೀಡಿ ಸನ್ಮಾನಿಸಲಾಯಿತು.



ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಚಳ್ಳಕೆರೆಯ ಪ್ರಗತಿಪರ ರೈತ ಆರ್.ಎ.ದಯಾನಂದರವರಿಗೆ ರಿಯಾಲಿಟಿಬುಕ್ ಆಫ್ ವರ್ಲ್ಡ್ ರೇಕಾರ್ಡ್ ನೀಡಿ ಸನ್ಮಾನಿಸಲಾಯಿತು.

---

## ಪ್ರಮುಖ ಸುದ್ದಿ

**ಒಳಮೀಸಲಾತಿ ಜಾರಿ: ಮಾದಿಗ ಜನಾಂಗದ ಅಭ್ಯುದಯಕ್ಕೆ ನಾಂದಿ**

# ಮಾದಿಗ ಎಂದೇ ನಮೂದಿಸುವಂತೆ ಜನಾಂಗಕ್ಕೆ ಮೊರೆ

» ಚಳ್ಳಕೆರೆ



ಕಳೆದ ಸುಮಾರು 30 ವರ್ಷಗಳಿಂದ ಮಾದಿಗ ಸಮುದಾಯಕ್ಕೆ ಒಳಮೀಸಲಾತಿ ಸೌಲಭ್ಯ ನೀಡುವಂತೆ ನಿರಂತರ ಪ್ರತಿಭಟನೆ, ಮುಖ್ಯಮಂತ್ರಿಗಳಿಗೆ ಮನವಿ, ಹೋರಾಟ, ಧರಣಿಸತ್ಯಾಗ್ರಹ ನಡೆಸಿದ ಪ್ರತಿಫಲವಾಗಿ ಸುಪ್ರೀಂಕೋರ್ಟ್ ಮಾದಿಗ ಒಳಮೀಸಲಾತಿಗೆ ಒಪ್ಪಿಗೆ ನೀಡಿದ್ದು, ಸಮೀಕ್ಷೆ ನಡೆಸುವ ಸಂದರ್ಭದಲ್ಲಿ ಪ್ರತಿಯೊಬ್ಬರೂ ಮಾದಿಗ ಎಂದು ದಾಖಲಿಸಬೇಕೆಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ, ಒಳಮೀಸಲಾತಿ ಹೋರಾಟಗಾರ ಬಿ.ಪಿ.ಪ್ರಕಾಶಮೂರ್ತಿ ತಿಳಿಸಿದ್ದಾರೆ.

ಅವರು, ಗುರುವಾರ ಪ್ರವಾಸಿಮಂದಿರದಲ್ಲಿ ಒಳಮೀಸಲಾತಿಗೆ ಸಂಬಂಧಪಟ್ಟಂತೆ ಜನಾಂಗದ ಪ್ರಮುಖ ಮುಖಂಡರಿಗೆ ಆಯೋಜಿಸಿದ್ದ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಈ ಹಿಂದೆ ಒಳಮೀಸಲಾತಿ ನೀಡುವ ಕುರಿತು ಹೋರಾಟ ನಡೆಸುವ ಸಂದರ್ಭದಲ್ಲಿ ಜನಾಂಗದಲ್ಲಿ ಹಲವಾರು ಪಂಗಡಗಳಿದ್ದು ಇದರಿಂದ ಒಳಮೀಸಲಾತಿ ಜಾರಿಗೆ ಅವಕಾಶವಿಲ್ಲದಂತಾಗಿತ್ತು. ಆದರೆ, ಈಗ ಉತ್ತಮ ಅವಕಾಶ ದೊರಕಿದ್ದು ಇದರ ಸದುಪಯೋಗಕ್ಕೆ ಜನಾಂಗ ಮುಂದಾಗಬೇಕೆಂದರು.

ನಿವೃತ್ತಬಿಸಿಎಂಅಧಿಕಾರಿಡಿ.ಟಿ.ಜಗನ್ನಾಥ ಮಾತನಾಡಿ, ಈ ಹಿಂದೆ ಸರ್ಕಾರದ ಉದ್ಯೋಗದಲ್ಲಿದ್ದು ಹೋರಾಟಕ್ಕೆ ಹೆಚ್ಚಿನ ಒತ್ತು ನೀಡಲು ಸಾಧ್ಯವಾಗಲಿಲ್ಲ. ಅಂದು ಹೋರಾಟ ನಡೆಸಿದ ಪ್ರಮುಖ ಹೋರಾಟಗಾರರು ಸೇವೆಯಿಂದ ನಿವೃತ್ತಿಪಡೆದಿದ್ದು, ಒಳಮೀಸಲಾತಿ ಜಾಗೃತಿಗಾಗಿ ಹೋರಾಟ ಮಾಡಲು ಸಿದ್ದರಿದ್ದಾರೆ. ಈ ಬಗ್ಗೆ ಈಗಾಗಲೇ ಹಲವಾರು ಬಾರಿ ಗ್ರಾಮೀಣ ಭಾಗದ ಪರಿಶಿಷ್ಟ ಜನಾಂಗದವರಿಗೆ ಮಾಹಿತಿ ನೀಡಲಾಗಿದೆ. ಆದರೂ ಕೆಲವೊಂದು ಸಂದರ್ಭದಲ್ಲಿ ತಪ್ಪುಗಳಾಗುತ್ತವೆ ಆದ್ದರಿಂದ ಗ್ರಾಮೀಣ ಭಾಗದ ನಮ್ಮ ಜನಾಂಗದ ಯುವಕರು ಹಾಗೂ ವಿದ್ಯಾವಂತರು ಈ ಬಗ್ಗೆ ಎಲ್ಲರಿಗೂ ಸೂಕ್ತ ಮಾರ್ಗದರ್ಶನ ನೀಡಿದ ಒಳಮೀಸಲಾತಿ ಜಾರಿಗೆ ಕೈಜೋಡಿಸಬೇಕೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಮಾಜಕಲ್ಯಾಣ ಇಲಾಖೆ ನಿವೃತ್ತ ಅಧಿಕಾರಿ ಡಿ.ದಯಾನಂದ, 30 ವರ್ಷಗಳ ಕನಸು ನನಸಾಗುವ ಕಾಲಬಂದಿದೆ. ಇದರಿಂದ ಜನಾಂಗದಲ್ಲಿ ಇನ್ನೂ ಹೆಚ್ಚಿನ ಕ್ರಿಯಾಶೀಲತೆ ಉಂಟಾಗುತ್ತದೆ. ಒಳಮೀಸಲಾತಿ ಸೌಲಭ್ಯ ದೊರೆತಲ್ಲಿ ಜನಾಂಗದ ಕಲ್ಯಾಣಕ್ಕೆ ಹೆಚ್ಚು ಅನುಕೂಲವಾಗಲಿದೆ. ಈ ನಿಟ್ಟಿನಲ್ಲಿ ಈಗಾಗಲೇ ಪ್ರಮುಖರು ಕೈಗೊಂಡ ನಿರ್ಧಾರಕ್ಕೆ ನಾವೆಲ್ಲರೂ ಬದ್ದರಾಗಬೇಕು. ತಾಲ್ಲೂಕಿನ ಪ್ರತಿಯೊಂದು ಗ್ರಾಮಕ್ಕೂ ಭೇಟಿ ನೀಡಿ ವಿಶೇಷವಾಗಿ ನಮ್ಮ ಸಮಾಜದ ಬಂಧುಗಳಿರುವ ಸ್ಥಳಕ್ಕೆ ತಪ್ಪದೆ ಭೇಟಿ ನೀಡಿ ಮಾರ್ಗದರ್ಶನ ನೀಡಿದಲ್ಲಿ ಒಳಮೀಸಲಾತಿ ಸೌಲಭ್ಯ ಜಾರಿಗೆ ಹೆಚ್ಚು ಸಹಕಾರಿಯಾಗಲಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಜನಾಂಗದ ಹಿರಿಯಮುಖಂಡರಾದ ಡಿ.ಟಿ.ಶ್ರೀನಿವಾಸ್, ಭೀಮನಕೆರೆಶಿವಮೂರ್ತಿ, ಆರ್. ರುದ್ರಮುನಿ, ಚನ್ನಿಗರಾಯ, ಬಿಎಸ್‌ಪಿಪ್ರಕಾಶ್, ಆರ್.ವೀರಭದ್ರಿ, ಹಿರೇಹಳ್ಳಿರುದ್ರಮುನಿ, ಉಮೇಶ್ ಚಂದ್ರಬ್ಯಾನರ್ಜಿ, ಮೈತ್ರಿದ್ಯಾಮಣ್ಣ, ಜಯಣ್ಣ, ಪಿ.ಮಾರಣ್ಣ, ಎಚ್.ವಿ. ಕೃಷ್ಣಮೂರ್ತಿ, ಕೆ.ಟಿ.ಮುತ್ತುರಾಜ್, ದ್ಯಾವರನಹಳ್ಳಿ ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಗ್ರಾಹಕರ ಸಂವಾದ

» **ದಾವಣಗೆರೆ**

ದಾವಣಗೆರೆ ಬೆಸ್ಕಾಂ ನಗರ ಉಪವಿಭಾಗ-1ರ ವತಿಯಿಂದ ಏಪ್ರಿಲ್ 19 ರಂದು ಮಧ್ಯಾಹ್ನ 3 ರಿಂದ 5.30 ರವರೆಗೆ ಗ್ರಾಹಕರ ಸಂವಾದ ಸಭೆಯನ್ನು ನಗರ ಉಪ ವಿಭಾಗ-1 ರಲ್ಲಿ ಹಮ್ಮಿಕೊಳ್ಳಲಾಗಿದೆ. ಈ ವ್ಯಾಪ್ತಿಗೆ ಬರುವ ಗ್ರಾಹಕರು ತಮ್ಮ ಅಹವಾಲುಗಳನ್ನು ಸಲ್ಲಿಸಬಹುದಾಗಿದೆ.

### ವ್ಯಕ್ತಿ ಕಾಣೆ: ಪತ್ತೆಗೆ ಮನವಿ

» **ದಾವಣಗೆರೆ**

ಜಿಲ್ಲೆಯ ದಾವಣಗೆರೆ ತಾಲ್ಲೂಕಿನ ಎಲೆಬೇತೂರು ಗ್ರಾಮದ ನಿವಾಸಿ ನಾಗರಾಜ್ ಬಿ.ಎನ್ ತಂದೆ ಲೇಟ್ ನಾಗಪ್ಪ (ಸು.53 ವರ್ಷ) ವ್ಯಕ್ತಿ ಕಾಣೆಯಾದ ಕುರಿತು 2025ರ ಮಾರ್ಚ್ 24 ರಂದು ದಾವಣಗೆರೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ನಾಗರಾಜ್ ಬಿ.ಎನ್, ಸು.5.2 ಅಡಿ ಎತ್ತರ, ದುಂಡು ಮುಖ, ಎಣ್ಣೆಗೆಂಪು ಮೈಬಣ್ಣ, ದಪ್ಪನೆಯ ಮೈಕಟ್ಟು ಹೊಂದಿದ್ದು, ಹೆಚ್ಚಾಗಿ ಬಿಳಿ ಅಂಗಿ ಪಂಚೆ ಧರಿಸಿರುತ್ತಾರೆ. ಈ ಮೇಲ್ಕಂಡ ವ್ಯಕ್ತಿಯ ಕುರಿತು ಮಾಹಿತಿ ಕಂಡುಬಂದಲ್ಲಿ ಗ್ರಾಮಾಂತರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08192-253100, ಕಂಟ್ರೋಲ್ ರೂಂ 08192-262555, ಗ್ರಾಮಾಂತರ ಉಪವಿಭಾಗದ ಉಪಾಧೀಕ್ಷಕರ ಕಚೇರಿಯ 08192-262550 ದೂರವಾಣಿಗೆ ಸಂಪಕಿಸಬಹುದು ಎಂದು ಗ್ರಾಮಾಂತರ ಪೊಲೀಸ್ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಯುವತಿ ಕಾಣೆ

» **ದಾವಣಗೆರೆ**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿಶ್ವನಾಥಪುರ ಗ್ರಾಮದ ನಿವಾಸಿ ಸರಸ್ವತಿ ತಂದೆ ರಾಮಪ್ಪ (19 ವರ್ಷ) ಯುವತಿ ಕಾಣೆಯಾದ ಕುರಿತು ಏಪ್ರಿಲ್ 16 ರಂದು ಬಡಾವಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ಯುವತಿ, ಸುಮಾರು 5.4 ಅಡಿ ಎತ್ತರ, ಕೋಲುಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು, ಕಪ್ಪು ತಲೆ ಕೂದಲು ಹೊದಿದ್ದು, ಎಡಗಾಲು ಮತ್ತು ಬಲಗೈ ಅಂಗವಿಕಲತೆಯಿಂದ ಕೂಡಿರುತ್ತದೆ. ಕನ್ನಡ ಭಾಷೆ ಮಾತನಾಡುವಳು. ಮನೆಯಿಂದ ಹೋಗುವಾಗ ಕೆಂಪು ಬಣ್ಣದ ಚೂಡಿದಾರ ಧರಿಸಿರುತ್ತಾಳೆ. ಈ ಮೇಲ್ಕಂಡ ಯುವತಿಯ ಕುರಿತು ಮಾಹಿತಿ ಕಂಡುಬಂದಲ್ಲಿ ಬಡಾವಣೆ ಪೊಲೀಸ್ ಠಾಣೆ ದೂರವಾಣಿ ಸಂ : 08192-272012, ಡಿವೈಎಸ್‍ಪಿ ನಗರ ಕಛೇರಿ 08192-259213, ಎಸ್.ಪಿ. ಕಛೇರಿ 08192-253400, ದಾವಣಗೆರೆ ಕಂಟ್ರೋಲ್ ರೂಂ 08192-253100 ಗೆ ಸಂಪರ್ಕಿಸಬಹುದು ಎಂದು ಬಡಾವಣೆ ಪೊಲೀಸ್ ಠಾಣೆಯ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಿಇಟಿ ಪರೀಕ್ಷೆ; ಗಣಿತಕ್ಕೆ 399, ಜೀವಶಾಸ್ತ್ರಕ್ಕೆ 498 ಗೈರು

» **ದಾವಣಗೆರೆ**

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಏಪ್ರಿಲ್ 17 ರಂದು ನಡೆಸಲಾದ ಸಿಇಟಿ ಪರೀಕ್ಷೆಯಲ್ಲಿ ಬೆಳಗಿನ ಅವಧಿಯಲ್ಲಿ ನಡೆದ ಗಣಿತಶಾಸ್ತ್ರ ವಿಷಯವನ್ನು 12886 ವಿದ್ಯಾರ್ಥಿಗಳು ನೊಂದಾಯಿಸಿದ್ದು 12487 ಹಾಜರಾಗಿ 399 ವಿದ್ಯಾರ್ಥಿಗಳು ಗೈರು ಹಾಜರಾಗಿರುವರು. ಮಧ್ಯಾಹ್ನ ಜೀವಶಾಸ್ತ್ರ ವಿಷಯದ ಪರೀಕ್ಷೆ ನಡೆದಿದ್ದು ನೊಂದಾಯಿಸಿದ 11688 ವಿದ್ಯಾರ್ಥಿಗಳಲ್ಲಿ 11190 ವಿದ್ಯಾರ್ಥಿಗಳು ಹಾಜರಾಗಿ 498 ವಿದ್ಯಾರ್ಥಿಗಳು ಗೈರು ಹಾಜರಾಗಿರುವರು ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಸಿದ್ದಪ್ಪ ತಿಳಿಸಿದ್ದಾರೆ.

### ಉಪಲೋಕಾಯುಕ್ತಾರು ಜಿಲ್ಲೆಗೆ ಭೇಟಿ: ಸಾರ್ವಜನಿಕರಿಂದ ನೇರ ದೂರು ಅರ್ಜಿ ಸ್ವೀಕಾರ

» **ದಾವಣಗೆರೆ**

ನ್ಯಾಮಮೂರ್ತಿ ಹಾಗೂ ಉಪಲೋಕಾಯುಕ್ತರಾದ ಬಿ.ವೀರಪ್ಪ ಅವರು ಏಪ್ರಿಲ್ 22 ರಿಂದ 26 ರವರೆಗೆ ಐದು ದಿನಗಳ ಕಾಲ ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಏಪ್ರಿಲ್ 24 ರಂದು ಜಿಲ್ಲಾಧಿಕಾರಿಗಳ ಕಚೇರಿಯ ತುಂಗಭದ್ರಾ ಸಭಾಂಗಣದಲ್ಲಿ ಸಾರ್ವಜನಿಕರಿಂದ ನೇರವಾಗಿ ದೂರು ಅರ್ಜಿಗಳನ್ನು ಸ್ವೀಕರಿಸುವರು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್ ತಿಳಿಸಿದರು. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಉಪಲೋಕಾಯುಕ್ತರ ಭೇಟಿ ಹಿನ್ನಲೆಯಲ್ಲಿ ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ಏಪ್ರಿಲ್ 23 ರಂದು ವಿವಿಧ ಸ್ಥಳಗಳ ವೀಕ್ಷಣೆ ಹಾಗೂ ಇಲಾಖೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು. ಏ.24 ರಂದು ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಬೆಳಿಗ್ಗ 10 ಗಂಟೆಯಿಂದ ಮ.1.30 ಹಾಗೂ ಮ.2.30 ರಿಂದ ಸಂಜೆ 5 ಗಂಟೆಯವರೆಗೆ ಸಾರ್ವಜನಿಕರಿಂದ ದೂರು ಹಾಗೂ ಅಹವಾಲು ಸ್ವೀಕರಿಸಿ ನೇರವಾಗಿ ವಿಚಾರಣೆ ನಡೆಸುವರು. ಏ.25 ರಂದು ವಿವಿಧ ಇಲಾಖೆಗಳಿಗೆ ಭೇಟಿ ನೀಡಿ ತುಂಗಭದ್ರಾ ಸಭಾಂಗಣದಲ್ಲಿ ಲೋಕಾಯುಕ್ತದಲ್ಲಿ ಬಾಕಿ ಇರುವ ಬಾಕಿ ಪ್ರಕರಣಗಳನ್ನು ದೂರುದಾರರ ಸಮಕ್ಷಮದಲ್ಲಿ ನೇರವಾಗಿ ವಿಚಾರಣೆ ನಡೆಸುವರು.

---

**ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಸೂಚನೆ**

# ಜಿಲ್ಲೆಯಲ್ಲಿ ಮಾದಕ ವಸ್ತುಗಳ ಬಳಕೆ ಬಗ್ಗೆ ಶಾಲಾ ಕಾಲೇಜುಗಳ ಆಡಳಿತ ಸಂಸ್ಥೆಗಳು ನಿಗಾ ವಹಿಸಿ

» **ಚಿತ್ರದುರ್ಗ**

ಶಾಲಾ ಕಾಲೇಜುಗಳ ಆಡಳಿತ ಸಂಸ್ಥೆಗಳು ತಮ್ಮ ಶಿಕ್ಷಣ ಸಂಸ್ಥೆ ವ್ಯಾಪ್ತಿಯಲ್ಲಿ ಮಾದಕ ವಸ್ತುಗಳ ಮಾರಾಟ ಹಾಗೂ ಬಳಕೆ ಬಗ್ಗೆ ತೀವ್ರ ನಿಗಾ ವಹಿಸಬೇಕು. ಯಾವುದೇ ಅಕ್ರಮ ಚಟುವಟಿಕೆಗಳು, ವಿದ್ಯಾರ್ಥಿಗಳ ವರ್ತನೆಯಲ್ಲಿ ಅನುಮಾನ ಕಂಡುಬಂದರೆ ಕೂಡಲೆ ಸಂಸ್ಥೆಗಳು ಅಥವಾ ಶಿಕ್ಷಕರು ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ (Narco Coordination center) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಗಾಂಜಾ ಬೆಳೆಯುವುದು ಹಾಗೂ ಮಾರಾಟ ಮಾಡುವುದನ್ನು ತಡೆಯಲು ವಿವಿಧ ಇಲಾಖೆಗಳು ಪೊಲೀಸರೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಅಬಕಾರಿ, ಅರಣ್ಯ, ಕೃಷಿ ಹಾಗೂ ತೋಟಗಾರಿಕೆ ಅಧಿಕಾರಿಗಳು ಗಾಂಜಾ ಬೆಳೆಯುವ ಪ್ರದೇಶಗಳಲ್ಲಿ ಕಣ್ಗಾವಲು ಇರಿಸುವುದರೊಂದಿಗೆ, ಕೂಂಬಿಂಗ್ ಕಾರ್ಯಾಚರಣೆ ನಡೆಸಬೇಕು ಎಂದು ಟಿ.ವೆಂಕಟೇಶ್ ನಿರ್ದೇಶಿಸಿದರು.

**ಅಕ್ರಮ ಮದ್ಯ ಮಾರಾಟ ಲೈಸೆನ್ಸ್ ರದ್ದು:** ಹಿರಿಯೂರು ತಾಲ್ಲೂಕು ಕಂದಿಕೆರೆ ಗ್ರಾಮದ ಪ್ರಾವಿಜನ್ ಸ್ಟೋರ್ ಒಂದರಲ್ಲಿ ಮದ್ಯ ಮಾರಾಟ ಮಾಡುತ್ತಿರುವುದು ಬೆಳಕಿಗೆ ಬಂದಿದೆ. ಈ ಸಂಬಂಧ ಈಗಾಗಲೇ ಪ್ರಕರಣ ದಾಖಲಿಸಲಾಗಿದೆ. ಪ್ರಾವಿಜನ್ ಸ್ಟೋರ್‌ಗೆ ಮದ್ಯ ಸರಬರಾಜು ಮಾಡಿದ ಮದ್ಯದ ಅಂಗಡಿಯ ಲೈಸೆನ್ಸ್ (ಸನ್ನದು) ಅಮಾನತು ಮಾಡಲು ಶಿಫಾರಸ್ಸು ಮಾಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.



ಕೆಲ ತಿಂಗಳ ಹಿಂದೆ ಚಿತ್ರದುರ್ಗ ನಗರಸಭೆಯಲ್ಲಿತೆರವಾಗಿದ್ದವಾರ್ಡ್‌ಸದಸ್ಯ ಸ್ಥಾನಕ್ಕೆ ನಡೆದ ಚುನಾವಣೆ ದಿನದಂದು ನಗರದಲ್ಲಿ ಮದ್ಯ ಮಾರಾಟ ಮಾಡದಂತೆ ನಿಷೇಧಾಜ್ಞೆ ಹೊರಡಿಸಲಾಗಿತ್ತು. ಆದರೆ ನಿಷೇಧಾಜ್ಞೆ ಉಲ್ಲಂಘಿಸಿ ಮದ್ಯ ಮಾರಾಟ ಮಾಡಿದ ಮದ್ಯದ ಅಂಗಡಿ ಲೈಸೆನ್ಸ್ ರದ್ದು ಮಾಡಲು ಕ್ರಮ ಕೈಗೊಳ್ಳುವಂತೆ ಶಿಫಾರಸ್ಸು ಮಾಡಿರುವುದಾಗಿ ಪೊಲೀಸ್ ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದರು.

ವೈದ್ಯರು ನೀಡುವ ಔಷಧ ಚೀಟಿ ಇಲ್ಲದೆ, ಪ್ರಲೋಭಕ ಔಷಧಗಳನ್ನು ಮಾರಾಟ ಮಾಡುವಂತಿಲ್ಲ. ಈ ಕುರಿತು ಜಿಲ್ಲೆಯ ಎಲ್ಲಾ ಔಷಧ ಅಂಗಡಿಗಳ ಮಾಲಿಕರೊಂದಿಗೆ ಸಭೆ ನಡೆಸಿ ಎಚ್ಚರಿಕೆ ನೀಡಬೇಕು. ಒಂದು ವೇಳೆ ವೈದ್ಯರ ಶಿಫಾರಸು ಚೀಟಿ ಇಲ್ಲದೆಯೇ ಪ್ರಲೋಭಕ ಔಷಧಗಳನ್ನು ಮಾರಾಟ ಮಾಡುವುದು ಕಂಡುಬಂದರೆ, ಅವರ ಪರವಾನಿಗೆಯನ್ನು ರದ್ದು ಪಡಿಸಲು ಶಿಫಾರಸ್ಸು ಮಾಡುವಂತೆ ಜಿಲ್ಲಾ ಔಷಧ ನಿಯಂತ್ರಕರಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದರು.

ವೈದ್ಯರ ಶಿಫಾರಿಸ್ಸಿನ ಮೇರೆಗೆ ಪ್ರಲೋಭಕ ಔಷಧಗಳನ್ನು ಪಡೆಯುತ್ತಿರುವವರ ಆಧಾರ್ ಕಾರ್ಡ್ ಅನ್ನು ದಾಖಲೆಗಾಗಿ, ಪಡೆದು ಔಷಧಗಳನ್ನು ವಿತರಿಸಲು ಕ್ರಮ ಕೈಗೊಳ್ಳಬೇಕು. ವಿತರಿಸಿ ಔಷಧಗಳ ಪ್ರಮಾಣದ ಲೆಕ್ಕವಿಡಲು ಔಷಧ ಅಂಗಡಿಗಳಿಗೆ ನಿರ್ದೇಶನ ನೀಡುವಂತೆ ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್ ಜಿಲ್ಲಾ ಔಷಧ ನಿಯಂತ್ರಕರಿಗೆ ಈ ಸಂದರ್ಭದಲ್ಲಿ ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಮಾತನಾಡಿ, ಮಾದಕ ವ್ಯಸನ ಹಾಗೂ ಅಪರಾಧ ಕೃತ್ಯಗಳಿಗೆ ನೇರ ಸಂಬಂಧಿದೆ. ಮಾದಕ ವ್ಯಸನಿಗಳು ಮಾನಸಿಕ ಸ್ಥಿಮಿತ ಕಳೆದುಕೊಳ್ಳುವುದರಿಂದ ಕೊಲೆ, ಅತ್ಯಾಚಾರ ಮುಂತಾದ ಅಪರಾಧ ಕೃತ್ಯವೆಸಗುತ್ತಾರೆ. ಮಾದಕ ಸೇವನೆಯ ದುಷ್ಪರಿಣಾಮ, ಅಪರಾಧ ಹಾಗೂ ಕಾನೂನಿನ ಬಗ್ಗೆ ರಜೆಯ ಬಳಿಕ ಶಾಲಾ ಕಾಲೇಜುಗಳು ಪ್ರಾರಂಭಗೊಂಡ ನಂತರ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಜಿಲ್ಲೆಯಾದ್ಯಂತ ಹಮಿಕೊಳ್ಳಲಾಗುವುದು. ಕಳೆದ ಮಾರ್ಚ್ ತಿಂಗಳಲ್ಲಿ ಜಿಲ್ಲೆಯಲ್ಲಿ ಅನಧಿಕೃತವಾಗಿ ವೈದ್ಯರ ಚೀಟಿ ಇಲ್ಲದೆ ಪ್ರಲೋಭಕಔಷಧಟಾಕ್ಸ್‌ಸಿರಪ್‌ಮಾರಾಟ ಮಾಡುವ ಜಾಲ ಪತ್ತೆ ಹೆಚ್ಚಲಾಗಿದೆ. ಬಳ್ಳಾರಿಯ ವ್ಯಕ್ತಿಯೋರ್ವ ಜಿಲ್ಲೆಯಲ್ಲಿ ಅನಧಿಕೃತವಾಗಿ 9 ಸಾವಿರ ಟಾಕ್ಸ್ ಸಿರಪ್ ಸರಬರಾಜು ಮಾಡಿರುವುದು ವಿಚಾರಣೆ ವೇಳೆ ಬೆಳಕಿಗೆ ಬಂದಿದೆ. ಈ ಜಾಲ 5 ವರ್ಷಗಳಿಂದ ಬಳ್ಳಾರಿ, ರಾಯದುರ್ಗ ಹಾಗೂ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸಿದೆ. ವಿವಿಧ ಇಲಾಖೆಗಳ ಸಮನ್ವಯತೆ ಹಾಗೂ ಗುಪ್ತಚರ ಮಾಹಿತಿಯನ್ನು ಬಲಪಡಿಸುವುದರೊಂದಿಗೆ ಜಿಲ್ಲೆಯಲ್ಲಿ ಮಾದಕ ವಸ್ತುಗಳ ಮಾರಾಟ ಜಾಲಗಳನ್ನು ಭೇದಿಸಿ ನಿಷ್ಕ್ರಿಯಗೊಳಿಸಲಾಗುತ್ತಿದೆ. ಸಾರ್ವಜನಿಕರು, ಶಿಕ್ಷಕರು ವಿದ್ಯಾರ್ಥಿಗಳು ಮಾದಕ ವಸ್ತುಗಳ ಮಾರಾಟದ ಬಗ್ಗೆ ಡ್ರಗ್ ಫ್ರೀ ಕರ್ನಾಟಕ ಆಪ್ ಮೂಲಕ ದೂರು ನೀಡಬಹುದು. ದೂರು ನೀಡುವವರ ವಿವರ ಬಹಿರಂಗಕ್ಕೆ ಇಲ್ಲಿ ಅವಕಾಶವಿಲ್ಲ, ಅಂತಹವರ ಮಾಹಿತಿ ಗೌಪ್ಯವಾಗಿರುತ್ತದೆ ಎಂದರು.

ನಾರ್ಕೋಟಿಕ್ ವಿಭಾಗದ ಪೊಲೀಸ್ ಇನ್ಸ್‌ಪೆಕ್ಟರ್ ವೆಂಕಟೇಶ್ ರೆಡ್ಡಿ ಮಾತನಾಡಿ, ಜಿಲ್ಲೆಯಲ್ಲಿ ಕಳೆದ ಸಾಲಿನಲ್ಲಿ 40 ಹಾಗೂ ಪ್ರಸಕ್ತ ಸಾಲಿನಲ್ಲಿ 30 ಗಾಂಜಾ ಸೇವನೆ ಪ್ರಕರಣಗಳು ದಾಖಲಾಗಿವೆ. ಯಾವುದೇ ರೀತಿಯವೈದ್ಯಕೀಯಹಾಗೂರಾಸಾಯನಿಕ ಮಾದಕ ವಸ್ತುಗಳ ಸೇವನೆ ಅಥವಾ ಮಾರಾಟದ ಪ್ರಕರಣಗಳು ದಾಖಲಾಗಿಲ್ಲ. ನಾಯಕನಹಟ್ಟಿ, ರಾಂಪುರ, ರಾಮಗಿರಿ ಬೆಟ್ಟದ ಸುತ್ತಮುತ್ತಲಿನ ಪ್ರದೇಶದಲ್ಲಿ ಚೆಂಡೂ ಹೂ, ತೊಗರಿ ಬೆಳೆಗಳ ಮಧ್ಯ ಹಾಗೂ ಅರಣ್ಯ ಪ್ರದೇಶದಲ್ಲಿ ಗಾಂಜಾ ಬೆಳೆಯಲಾಗುತ್ತದೆ. ಈ ಹಿನ್ನೆಲೆಯಲ್ಲಿ ಈ ಪ್ರದೇಶಗಳಲ್ಲಿ ಕೂಂಬಿಂಗ್ ನಡೆಸಲಾಗಿದೆ. ಇದರ ಹೊರತಾಗಿ ನಗರ ಪ್ರದೇಶದಲ್ಲಿ ಮಾತ್ರೆ ಹಾಗೂ ಕೆಲವು ಕೆಮ್ಮಿನ ಔಷಧ, ಸಲ್ಯೂಷನ್‌ಗಳ ಸೇವನೆ ಮಾಡುತ್ತಿರುವುದು ಬೆಳಕಿಗೆ ಬಂದಿವೆ. ಪದೇ ಪದೇ ಗಾಂಜಾ ಸೇವಿಸುವರನ್ನು ಜಿಲ್ಲಾಸ್ಪತ್ರೆಯ ವ್ಯಸನ ಮುಕ್ತ ಕೇಂದ್ರಕ್ಕೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಆದರೆ ಆಸ್ಪತ್ರೆಯಲ್ಲಿ ವ್ಯಸನಿಗಳಿಗೆ ಸಮರ್ಪಕ ಚಿಕಿತ್ಸೆ ದೊರಕುತ್ತಿಲ್ಲ ಎಂದು ಮಾಹಿತಿ ನೀಡಿದರು. ಜಿಲ್ಲಾಧಿಕಾರಿಗಳು ಪ್ರತಿಕ್ರಿಯಿಸಿ, ಜಿಲ್ಲಾ ಆಸ್ಪತ್ರೆಯ ಶಸ್ತ್ರಚಿಕಿತ್ಸಕರಿಗೆ ಈ ಬಗ್ಗೆ ಸೂಕ್ತ ರೀತಿಯಲ್ಲಿ ನಿರ್ದೇಶನ ನೀಡಲಾಗುವುದು ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜೆ.ಕುಮಾರಸ್ವಾಮಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಜಿಲ್ಲಾ ಔಷಧ ನಿಯಂತ್ರಕ ಗಿರೀಶ್ ಸೇರಿದಂತೆ ವಿವಿಧ ಶಾಲಾ ಕಾಲೇಜುಗಳು ಪ್ರಾಂಶುಪಾಲರು ಉಪಸ್ಥಿತರಿದ್ದರು.

---

# ಆಹಾರ ಪೌಷ್ಟಿಕತೆ, ನೈರ್ಮಲ್ಯ ಜ್ಞಾನ ತಿಳಿದು ಸ್ವಾಸ್ಥ ಸಮಾಜ ಕಟ್ಟಿಕೊಳ್ಳಿ: ಮಂಜುನಾಥ

» **ಚಿತ್ರದುರ್ಗ**

ಆಹಾರ ಪೌಷ್ಠಿಕತೆ ನೈರ್ಮಲ್ಯ ಜ್ಞಾನ ತಿಳಿದು ಸ್ವಾಸ್ಥ್ಯ ಸಮಾಜ ಕಟ್ಟಿಕೊಳ್ಳಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ವಿಜಾಪುರ ಗ್ರಾಮದ ಅಂಗನವಾಡಿ ಕೇಂದ್ರದ ಬಳಿ ಇರುವ ಹನುಮಂತ ದೇವಸ್ಥಾನದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಇಲಾಖೆ ಮತ್ತು ಚಿಕ್ಕಬೆನ್ನೂರು ಗ್ರಾಮ ಪಂಚಾಯತಿ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಗ್ರಾಮ ಆರೋಗ್ಯ ಪೌಷ್ಟಿಕ ನೈರ್ಮಲ್ಯ ಸಭೆಯಲ್ಲಿ ಅವರು ಮಾತನಾಡಿದರು.

ಗರ್ಭಿಣಿ, ಬಾಣಂತಿ, ಮಕ್ಕಳು ಮತ್ತು ವಯೋವೃದ್ಧರಲ್ಲಿ ಕಂಡು ಬರುವ ರಕ್ತ ಹೀನತೆ ಸರಿದೂಗಿಸಲು ನುಗ್ಗೆ ಸೊಪ್ಪು, ಬಸಲೆ, ಗೋಣಿ ದಂಟಿನ ಸೊಪ್ಪು, ಪಾಲಕ ಸೊಪ್ಪು ಹೇರಳವಾಗಿ ಬಳಸಿ ಮನೆಗಳ ಮುಂದೆ ಕೈ ತೋಟ ಮಾಡಿಕೊಂಡು ನಿಮ್ಮ ಮನೆಗೆ ಅಗತ್ಯವಿರುವ ತರಕಾರಿಗಳನ್ನು ಬೆಳೆಯಲು ಪ್ರಾರಂಭಿಸಿ ಕುಟುಂಬದ ಆರ್ಥಿಕ ಹೊರೆ ಕಡಿಮೆ ಮಾಡಿ ಎಂದರು.

ಆಹಾರ ವರ್ಗೀಕರಣ, ಶಕ್ತಿ ವರ್ಧಕ ಆಹಾರ, ದೇಹದ ಬೆಳವಣಿಗೆಗೆ ಅಗತ್ಯವಾದ ಆಹಾರ ಮತ್ತು ದೇಹದ ರಕ್ಷಣೆಗೆ ಬೇಕಾದ ಆಹಾರಗಳು, ಧಾನ್ಯಗಳು, ದ್ವಿದಳ ದಾನ್ಯಗಳು, ಸೊಪ್ಪು ತರಕಾರಿ



ಮೀನು, ಹಾಲು- ತುಪ್ಪ, ಬೇಳೆಕಾಳುಗಳು, ಅನ್ನಾಂಗಗಳ ಉಪಯೋಗ ದೊರೆಯುವ ಮೂಲ ಬಳಸುವ ವಿಧಾನದ ಬಗ್ಗೆ ತಿಳಿಸಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಅವರು ಕೈ ತೊಳೆಯುವ ವಿಧಾನದ ಬಗ್ಗೆ ಹಾಗೂ ಕುಟುಂಬ ಯೋಜನೆಯಲ್ಲಿ ಪುರುಷರ ಭಾಗವಹಿಸುವಿಕೆ ಬಗ್ಗೆ ತಿಳಿಸಿದರು.

ಆರೋಗ್ಯ ನಿರೀಕ್ಷಣಾಧಿಕಾರಿ ಪ್ರವೀಣ್ ಕುಮಾರ್ ಕ್ಷಯರೋಗ ನಿಯಂತ್ರಣದ ಬಗ್ಗೆ ತಿಳಿಸಿದರು.

ಇದೇ ಸಂದರ್ಭದಲ್ಲಿ ಅಂಗನವಾಡಿ ಕೇಂದ್ರದ ಮಕ್ಕಳಿಗೆ ಲಸಿಕಾ ಅಧಿವೇಶನ ನಡೆಸಿ 10 ಮಕ್ಕಳಿಗೆ ವಿವಿಧ ಹಂತದ ಲಸಿಕೆ ನೀಡಲಾಯಿತು. ಪೌಷ್ಟಿಕಾಹಾರ ಪ್ರಾತ್ಯಕ್ಷಿಕೆ ನೀಡಲಾಯಿತು

ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಚಂದ್ರಶೇಖರ್, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಶೋಭಾ, ಸ್ಥಳೀಯ ಸಮುದಾಯ ಸಂಪನ್ಮೂಲ ವ್ಯಕ್ತಿ ಆಶಾ, ಆಶಾ ಕಾರ್ಯಕರ್ತೆ ಮಮತ, ಗ್ರಾಮದ ಮುಖಂಡರಾದ ಕೆ.ದ್ಯಾಮಪ್ಪ, ತಿಪ್ಪೇಸ್ವಾಮಿ, ನಾಗರಾಜು, ಕಿಶೋರಿಯರು, ಗರ್ಭಿಣಿಯರು, ಮಕ್ಕಳು ಉಪಸ್ಥಿತರಿದ್ದರು.

---

## ಮಕ್ಕಳಲ್ಲಿ ಅನೇಕ ಪ್ರತಿಭೆಗಳು ಸಾಮರ್ಥ್ಯ ಶಕ್ತಿಯಿದೆ-ಪಿಂಟೋ



» **ಹೊಸದುರ್ಗ**

ಮಕ್ಕಳಲ್ಲಿ ಅನೇಕ ಪ್ರತಿಭೆಗಳು ಸಾಮರ್ಥ್ಯ ಹಾಗೂ ಮಕ್ಕಳಿಗೆ ಶಕ್ತಿಯಿದೆ. ಮಕ್ಕಳ ಪ್ರತಿಭೆಗಳನ್ನು ಪ್ರೋತ್ಸಾಹಿಸಲು, ಜೀವನ ಮೌಲ್ಯಗಳನ್ನು ಬೆಳೆಸಿಕೊಳ್ಳುವ ಉದ್ದೇಸದಿಂದ ಹಳ್ಳಿಯ ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಯ ಮಕ್ಕಳನ್ನು ಗುರುತಿಸಿ ಅಂತಹ ಮಕ್ಕಳಿಗೆ ಬೇಸಿಗೆ ಶಿಬಿರವು ತುಂಬಾ ಉಪಯುಕ್ತವಾಗಿದೆ ಎಂದು ನಿಸರ್ಗ ಸಂಸ್ಥೆಯ ನಿರ್ದೇಶಕಿ ವಂದನೀಯ ಸಿಸ್ಟರ್ ಮರಿಯಾ ಪಿಂಟೊ ತಿಳಿಸಿದರು.ಪಟ್ಟಣದ ನಿಸರ್ಗ ಸಂಸ್ಥೆ ವತಿಯಿಂದ ನಿಸರ್ಗ ಮಕ್ಕಳ ಬಳಗದಲ್ಲಿರುವ ಮಕ್ಕಳಿಗೆ ಆಯೋಜಿಸಲಾಗಿದ್ದ ಬೇಸಿಗೆ ಕಾರ್ಯಕ್ರಮದ ಮುಕ್ತಾಯ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಡಾ: ಅನಂತ್ ಮಾತನಾಡಿ ಮಕ್ಕಳಿಗೆ ಈ ಹಿಂದೆ ಸರ್ಕಾರಿ ಶಾಲೆಯಲ್ಲಿ ಓದಿದ ಮಕ್ಕಳೇ ಈ ದೇಶದಲ್ಲಿ ಉತ್ತಮ ಪ್ರಜೆಯಾಗಿ ಒಳ್ಳೆಯ ಸಾಧನೆ ಮಾಡಿದ್ದಾರೆ, ಒಳ್ಳೆಯ ಅಧಿಕಾರದಲ್ಲಿದ್ದಾರೆ ಹಾಗೂ ದೇಶವನ್ನು ಆಳುತಿದ್ದಾರೆ ಹಾಗೇಯೇ ನಿಸರ್ಗ ಸಂಸ್ಥೆಯವರು ಮಕ್ಕಳಿಗೆ ಉತ್ತಮ ಪ್ರಜೆಯಾಗಲಿಕ್ಕೆ ತುಂಬಾ ಸಹಾಕಾರಿಗಳಾಗಿದ್ದಾರೆ. ಇದರ ಉಪಯೋಗವನ್ನು ಪಡೆಯಿರಿ ಎಂದರು.ಮುಖ್ಯ ಅತಿಥಿಗಳಾಗಿ ಸಂತ ಅಂತೋನಿ ಶಾಲೆ ವ್ಯವಸ್ಥಪಕ ಫಾದರ್ ರಿಚರ್ಡ್ ಪಾಯಸ್,. ಸಿ.ಡಿ.ಸಿ.ಸಿ ಬ್ಯಾಂಕ್‌ನ ನಿರ್ದೇಶಕರು ಹಾಜರಿದ್ದರು.ನಿಸರ್ಗ ಸಂಸ್ಥೆಯ ಸಿಬ್ಬಂದಿಯವರು ಮಕ್ಕಳಿಗೆ ಮಕ್ಕಳ ಹಕ್ಕುಗಳು, ನಾಯಕತ್ವ ಕುರಿತು ವಿವರವಾಗಿ ತಿಳಿಸಿದರು, ಮಕ್ಕಳಿಂದ ಗುಂಪು ಚಟುವಟಿಕೆ, ರೂಪಕಗಳು, ಜಾನಪದ ನೃತ್ಯ, ಹಾಡುಗಳನ್ನು ಪ್ರದರ್ಶಿಸಿದರು.

---

**ಪ್ರಮುಖ ಸುದ್ದಿ**

**ವಿದ್ಯಾರ್ಥಿಗಳ ಮುಖದಲ್ಲಿ ಮೂಡಿದ ಮಂದಹಾಸದ ನಗು**

# ಹೊಸದುರ್ಗ ನಗರ ಸಾರಿಗೆ ಸಂಚಾರಕ್ಕೆ ಶಾಸಕರಿಂದ ಚಾಲನೆ

» **ಹೊಸದುರ್ಗ**

ವಿದ್ಯಾರ್ಥಿಗಳ ಬೇಡಿಕೆಯಂತೆ ಹೊಸದುರ್ಗ ಪಟ್ಟಣದಲ್ಲಿ ವಿದ್ಯಾರ್ಥಿಗಳ ಶಾಲಾ-ಕಾಲೇಜುಗಳ ಸಮಯಕ್ಕೆ ಸರಿಯಾಗಿ ನಗರ ಸಾರಿಗೆ ಸಂಚಾರಕ್ಕೆ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲಿ ವಿದ್ಯಾರ್ಥಿಗಳೊಂದಿಗೆ ಶಾಸಕ ಬಿ.ಜಿ.ಗೋವಿಂದಪ್ಪ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳನ್ನು ಕುರಿತು ಮಾತನಾಡಿದ ಶಾಸಕರು, ಗ್ರಾಮೀಣ ಪ್ರದೇಶದಿಂದ ವಿದ್ಯಾಭ್ಯಾಸಕ್ಕೆ ಆಗಮಿಸುವ ಶಾಲಾ-ಕಾಲೇಜು ವಿದ್ಯಾರ್ಥಿಗಳ ಅನುಕೂಲಕ್ಕೆ ನಗರ ಸಾರಿಗೆ ಬಸ್ ಆರಂಭಿಸಲಾಗುತ್ತಿದೆ. ಇದರಿಂದ ಸಾರ್ವಜನಿಕರಿಗೂ ಅನುಕೂಲ ಆಗಲಿದೆ. ಕೃಷಿ ಇಲಾಖೆ, ಬಿಸಿಎಂ ಇಲಾಖೆ ಹೀಗೆ ಹಲವು ಇಲಾಖೆಗಳಿಗೆ ರೈತರು ಸಂಚರಿಸಲು ನಗರ ಸಾರಿಗೆ ಆರಂಭಿಸಿದ್ದು, ಸಾರ್ವಜನಿಕರು ಇದರ ಸದುಪಯೋಗ



ಪಡೆದುಕೊಳ್ಳಬೇಕು. ನಗರ ವೇಗವಾಗಿ ಬೆಳೆಯುತ್ತಿದ್ದು, ಕೆ.ಎಸ್.ಆರ್.ಟಿ.ಸಿ ಹೊಸದುರ್ಗ ಘಟಕದಿಂದ ಈ ಸೇವೆ ಪ್ರಾರಂಭಿಸಲಾಗಿದೆ. ಮೊದಲು ಒಂದು ಬಸ್ ಸಂಚರಿಸಲಿದೆ. ನಂತರ ಬೇಡಿಕೆ, ಅಗತ್ಯತೆ ಆಧರಿಸಿ ಬಸ್‌ಗಳ ಸಂಖ್ಯೆಯನ್ನು ಹೆಚ್ಚಿಸಲು ಚಿಂತಿಸಲಾಗುವುದು ಎಂದು ತಿಳಿಸಿದರು. ವಿದ್ಯಾರ್ಥಿಗಳ ಜೋತೆ ಶಾಸಕ ಬಿ.ಜಿ.ಗೋವಿಂದಪ್ಪ ಬಸ್‌ನಲ್ಲಿ ಕೂತು ಪಟ್ಟಣದ ಹಲವು ಕಡೆ ಪ್ರಯಾಣಿಸಿದರು.

ಈ ವೇಳೆ ಮುಖಂಡರಾದ ಆಗ್ರೋ ಶಿವಣ್ಣ, ದೀಪಿಕಾ ಸತೀಶ್, ಪ್ರಾಚಾರ್ಯ ಡಾ.ಅಶ್ವಥ್ ಯಾದವ್, ಸತೀಶ್, ನಾಯಿಗೆರೆಚಂದ್ರಶೇಖರ್, ಬ್ರಹ್ಮಪಾಲ್, ಗ್ಯಾರಂಟಿ ಅನುಷ್ಠಾನ ಕಮಿಟಿಯ ಸದಸ್ಯ ಖಾದರ್‌ನವಾಜ್ (ಬಾಬು) ಕಾಲೇಜು ಸಿಬ್ಬಂದಿ ವರ್ಗ, ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯರುಗಳು ಸಾರಿಗೆ ಇಲಾಖೆ ಅಧಿಕಾರಿಗಳು ಹಾಗೂ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬಾಬಾ ಸಾಹೇಬ್ ಅಂಬೇಡ್ಕರ್

## ಅವರಿಗೇ ಭಾರತದ ಸದ್ಯದ ಪರಿಸ್ಥಿತಿಯ ಒಂದು ಸಣ್ಣ ಪರಿಚಯ



75 ವರ್ಷಗಳ ನಂತರ, ನೀವು ಕರಡು ಸಮಿತಿಯ ಅಧ್ಯಕ್ಷರಾಗಿ ಸಲ್ಲಿಸಿದ ಸಂವಿಧಾನದ ಅಧಿನಿಯಮಗಳಿಗೆ ಅನುಗುಣವಾಗಿ ನಡೆದುಕೊಂಡು ಬರುತ್ತಿರುವ ಭಾರತದ ಸದ್ಯದ ರಾಜಕೀಯ, ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ವಾತಾವರಣ ಒಳಗೊಂಡ ಒಟ್ಟಾರೆ ಪ್ರಗತಿ ಮತ್ತು ವಿಫಲತೆಯ ಬಗ್ಗೆ ನಿಮಗೊಂದು ಬಹಿರಂಗ ಪತ್ರ........

ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರೇ, ಭಾರತದ ಭೂಪ್ರದೇಶ ಮತ್ತು ಇಲ್ಲಿನ ಜನಜೀವನ, ಆಚಾರ ವಿಚಾರ, ನಂಬಿಕೆಗಳು, ಸಂಪ್ರದಾಯ ಎಲ್ಲವೂ ಒಂದು ಹಿಡಿತಕ್ಕೆ ಸಿಗುವಷ್ಟು ಸುಲಭವಿಲ್ಲ. ಇಲ್ಲಿನ ವೈವಿಧ್ಯತೆ ಇಡೀ ವಿಶ್ವದ ವೈವಿಧ್ಯತೆಗೆ ಹೆಚ್ಚು ಕಡಿಮೆ ಸಮ ಪ್ರಮಾಣದಲ್ಲಿದೆ ಎಂದೇ ಹೇಳಬಹುದು. ಅದು ನಮಗಿಂತ ನಿಮಗೇ ಹೆಚ್ಚು ಸ್ಪಷ್ಟವಾಗಿ ಅರ್ಥವಾಗಿರುತ್ತದೆ. ಈಗಂತೂ ಜನಸಂಖ್ಯೆಯಲ್ಲಿ ಸಹ ಭಾರತ ವಿಶ್ವದ ನಂಬರ್ ಒನ್ ದೇಶವಾಗಿದೆ.....

ಬಾಬಾ ಸಾಹೇಬ್ ಜಿ,

ವಿಶ್ವದ ಅತಿ ದೊಡ್ಡ ಸಂವಿಧಾನ ಹೊಂದಿರುವ, ಅತಿ ದೊಡ್ಡ ಪ್ರಜಾಪ್ರಭುತ್ವ ದೇಶ ಒಂದು ಪುಸ್ತಕದ ನೀತಿ ನಿಯಮಗಳ ಮೇಲೆ ಚಲಿಸುತ್ತಿರುವುದೇ ಒಂದು ಅದ್ಭುತ ಮತ್ತು ಆಶ್ಚರ್ಯ. ಶತಶತಮಾನಗಳಷ್ಟು ದೀರ್ಘಕಾಲದಿಂದ ಬೆಳೆದು ಬಂದಿರುವ ಇಲ್ಲಿಯ ಸೋಶಿಯಲ್ ಸ್ಟ್ರಕ್ಚರ್ ಎಷ್ಟೆಲ್ಲಾ ಅಸಮಾನತೆಯಿಂದ, ಧಾರ್ಮಿಕ ನಂಬಿಕೆಗಳಿಂದ, ಸಾಮಾಜಿಕ ಮೌಲ್ಯಗಳಿಂದ,

ಸೌಹಾರ್ದತೆಯ ಜೊತೆ ಸಂಘರ್ಷದಿಂದ ಮುನ್ನಡೆಯುತ್ತಿತ್ತು ಎಂದರೆ ಅದನ್ನು ನಿಮಗೆ ನಮ್ಮ ಪದಗಳಲ್ಲಿ ವಿವರಿಸುವುದು ಬಹಳ ಕಷ್ಟ ಮತ್ತು ಸಂಕೋಚ. ಅಂತಹ ದೈತ್ಯ ಪ್ರತಿಭೆ ನಿಮ್ಮದು.....

ಆದರೂ ಅದಕ್ಕೆ ನಿಮ್ಮೆಲ್ಲಾ ಅಧ್ಯಯನ, ಚಿಂತನೆ, ಶ್ರಮ ಎಲ್ಲವನ್ನೂ ಧಾರೆಯೆರೆದು ರಚಿಸಿರುವ ಸಂವಿಧಾನದ ಯಶಸ್ಸು – ಅಪಯಶಸ್ಸುಗಳ ಬಗ್ಗೆ ಒಂದು ಸಣ್ಣ ವಿವರಣೆ ಒಬ್ಬ ಶ್ರೀ ಸಾಮಾನ್ಯರಿಂದ.....

ಅಂಬೇಡ್ಕರ್ ಜಿ, ಸಾಮಾಜಿಕವಾಗಿ, ನೀವು ನಿಧನ ಹೊಂದಿದ 1956 ರ ನಂತರ ನಿಮ್ಮ ರಕ್ತ ಸಂಬಂಧದ ಬಂಧುಗಳಾದ ಅಸ್ಪೃಶ್ಯ ಜನಾಂಗ ಈಗ ಬಹುತೇಕ ಸಂಪೂರ್ಣ ಬದಲಾವಣೆಯ ಹಂತದಲ್ಲಿದೆ. ಅಸ್ಪೃಶ್ಯತೆ ಒಂದು ನಿಷೇಧಿತ ಆಚರಣೆಯಾಗಿದೆ. ಜನ ಬಹಿರಂಗವಾಗಿ ಇನ್ನೊಬ್ಬ ವ್ಯಕ್ತಿಯನ್ನು ಮುಟ್ಟುವುದಿಲ್ಲ ಎನ್ನಲು ಹಾಗೆಯೇ ಜಾತಿಯ ಹೆಸರಿನಲ್ಲಿ ನಿಂದನೆ ಮಾಡಲು ಭಯಪಡುವ ವಾತಾವರಣವಿದೆ. ಆದರೂ ಅಲ್ಲಲ್ಲಿ ನಿಂದನೆಗಳು, ಜಾತಿಯ ಕಾರಣಕ್ಕೆ ಕೊಲೆಗಳು, ಅತ್ಯಾಚಾರಗಳು, ಹಲ್ಲೆಗಳು ನಡೆಯುತ್ತಿರುವುದು ಸಹ ಮುಂದುವರಿದಿದೆ.....

ನೀವು ಅಂದು ತಾತ್ಕಾಲಿಕವಾಗಿ ನೀಡಿದ ಮೀಸಲಾತಿಯ ಪರಿಣಾಮವಾಗಿ ದೇಶದ ಎಲ್ಲಾ ಕಡೆ ರಾಜಕೀಯವಾಗಿ, ಶೈಕ್ಷಣಿಕವಾಗಿ, ಔದ್ಯೋಗಿಕವಾಗಿ ಸಾಕಷ್ಟು ಅಸ್ಪೃಶ್ಯ ಮತ್ತು ಹಿಂದುಳಿದ ಜನ ಉದ್ಯೋಗಿಗಳಾಗಿದ್ದಾರೆ. ಅವರ ಮಕ್ಕಳನ್ನು ಚೆನ್ನಾಗಿ ಓದಿಸಿ ಅವರೂ ಸಹ ಸಮಾಜದ ಮುಖ್ಯವಾಹಿನಿಯಲ್ಲಿ ಬೆರೆಯುವಂತೆ ಆಗಿದೆ.....

ರಾಜಕೀಯವಾಗಿ ದಲಿತರು ಮುಖ್ಯಮಂತ್ರಿಗಳು, ಉಪ ಪ್ರಧಾನಿಗಳು, ರಾಷ್ಟ್ರಾಧ್ಯಕ್ಷರು ಸಹ ಆಗಿದ್ದಾರೆ. ನ್ಯಾಯಾಂಗ, ಕಾರ್ಯಾಂಗ, ಶಾಸಕಾಂಗ, ಮಾಧ್ಯಮ ರಂಗ, ಕ್ರೀಡೆ, ವಿಜ್ಞಾನ ಮುಂತಾದ ಎಲ್ಲಾ ಕ್ಷೇತ್ರಗಳಲ್ಲೂ ತಮ್ಮ ಛಾಪು ಮೂಡಿಸುತ್ತಿದ್ದಾರೆ. ಹಾಗೆಂದು ಜಾತಿ ವ್ಯವಸ್ಥೆ, ಮೇಲು-ಕೀಳಿನ ನಿಂದನೆ ಸಂಪೂರ್ಣ ಮಾಯವಾಗಿದೆಯೇ ಎಂದರೆ ಅದು ಸಂಪೂರ್ಣ ಸುಳ್ಳು. ಜನರ ಮನಸ್ಸಿನಲ್ಲಿ ಈಗಲೂ ಜಾತಿಯ ಶ್ರೇಷ್ಠತೆಯ ವ್ಯಸನ ಒಂದು ರೋಗವಾಗಿ ಉಲ್ಬಣವಾಗಿದೆ, ಇಡೀ ವ್ಯವಸ್ಥೆ ಜಾತಿಯ ಆಧಾರದ ಮೇಲೆಯೇ ನಡೆಯುತ್ತಿದೆ......

ಆದ್ದರಿಂದ ನಿಮ್ಮ ಸಮ ಸಮಾಜದ ಆಶಯ ಶೇಕಡಾ 50% ರಷ್ಟು ಮಾತ್ರ ಯಶಸ್ವಿಯಾಗಿದೆ. ಉಳಿದ ಶೇಕಡಾ 50% ರಷ್ಟು ವಿಫಲವಾಗಿರುವುದು ಮಾತ್ರವಲ್ಲದೆ ಅದರ ವಿರುದ್ಧ ದಿಕ್ಕಿನಲ್ಲೂ ನಡೆಯುತ್ತಿದೆ. ಈ ವಿಷಯಕ್ಕಾಗಿ ಖಂಡಿತ ವಿಷಾದ ವ್ಯಕ್ತಪಡಿಸುವುದು ನಮ್ಮೆಲ್ಲರ ಹೊಣೆಗಾರಿಕೆಯಾಗಿದೆ......

ರಾಜಕೀಯವಾಗಿ ಒಂದಷ್ಟು ಉತ್ತಮ ಪ್ರಯೋಗಗಳು, ಚಳವಳಿಗಳು, ಬಂಡಾಯಗಳು, ನಾಯಕತ್ವಗಳು, ರೂಪಗೊಂಡಿರುವುದು ನಿಜವೇ ಆದರೂ ಅದಕ್ಕೆ ಅಸ್ಪೃಶ್ಯ ಮತ್ತು ಹಿಂದುಳಿದ ಜಾತಿಗಳ ಜನಸಂಖ್ಯೆ ಕಾರಣವೇ ಹೊರತು ಮೇಲ್ಜಾತಿಯವರ ಉದಾರತೆ ಅಥವಾ ವಿಶಾಲ ಮನೋಭಾವ ಅಥವಾ ಹೃದಯವಂತಿಕೆ ಕಾರಣವಲ್ಲ. ಹಾಗೆಯೇ ದಲಿತ ಹೋರಾಟಗಳು ಸಾಕಷ್ಟು ಪ್ರಭಾವಶಾಲಿಯಾಗಿ ಇಡೀ ದೇಶದಲ್ಲಿ ವ್ಯಾಪಿಸಿದೆ ಮತ್ತು ಅದು ಬಲಿಷ್ಠವಾಗಿದೆ ಎಂದು ಹೆಮ್ಮೆಯಿಂದ ಹೇಳಿಕೊಳ್ಳಬಹುದಾದ ಪರಿಸ್ಥಿತಿ ಇದೆ......

ಎಲ್ಲಾ ಶೋಷಣೆಗಳ ವಿರುದ್ಧವು ಪರಿಹಾರ ಸಿಗದಿದ್ದರೂ ಪ್ರತಿಭಟನೆಯ ಧ್ವನಿಗಳು ಮಾತ್ರ ಸದಾ ಮೊಳಗುತ್ತಿರುತ್ತದೆ. ಅದರಿಂದಾಗಿಯೇ ಶೋಷಿಸುವ ವರ್ಗದವರು ಬೇರೆ ಬೇರೆ ಮಾರ್ಗಗಳ ಮೊರೆ ಹೋಗುತ್ತಿರುವುದು ವಾಸ್ತವ ಸಂಗತಿಯಾಗಿದೆ......

ಶೈಕ್ಷಣಿಕವಾಗಿ, ಬಹುತೇಕ ಸಮಾಜದ ಎಲ್ಲ ವರ್ಗಗಳುಸ್ಪರ್ಧಾತ್ಮಕಜಗತ್ತಿನಲ್ಲಿಸ್ಪರ್ಧಿಸುತ್ತಾಅಂಕಗಳ ದೃಷ್ಟಿಯಿಂದ ಸಮ ಸಮಾಜ ನಿರ್ಮಾಣವಾಗಿದೆ. ಎಲ್ಲರೂ ಸಹ ಪ್ರತಿಭಾವಂತರೆ ಆಗುತ್ತಿದ್ದಾರೆ. ಕಳೆದ 20/25 ವರ್ಷಗಳಲ್ಲಿ ಶೈಕ್ಷಣಿಕ ಅಂಕಗಳ ವಿಚಾರವಾಗಿ ಎಲ್ಲಾ ಜಾತಿ – ಸಮುದಾಯದಗಳ ನಡುವೆ ಅಂತಹ ದೊಡ್ಡ ಅಂತರವೇನು ಇಲ್ಲ.....

ಆದರೆ ವ್ಯಾಪಾರ, ವ್ಯವಹಾರ, ಉದ್ಯಮಗಳಲ್ಲಿ ಈ 75 ವರ್ಷಗಳ ನಂತರವೂ ದಲಿತ – ಹಿಂದುಳಿದ ವರ್ಗಗಳು ನಿರೀಕ್ಷಿಸಿದಷ್ಟು ಯಶಸ್ಸು ಕಾಣಲು ಸಾಧ್ಯವಾಗಿಲ್ಲ. ಬಹುಶಃ ಅದಕ್ಕಾಗಿ ಮುಂದಿನ 50 ವರ್ಷಗಳಲ್ಲಿ ಇನ್ನೂ ಹೆಚ್ಚು ಪರಿಣಾಮಕಾರಿಯಾಗಿ ಕೆಲಸ ಮಾಡುವುದರಿಂದ ಸಾಧ್ಯವಾಗಬಹುದಾದ ಸಾಧ್ಯತೆ ಇದೆ......

ಬಾಬಾ ಸಾಹೇಬ್ ಜಿ,

ಈಗ ಕಳೆದ 30/35 ವರ್ಷಗಳಲ್ಲಿ ಜಾಗತೀಕರಣ ಅಂದರೆ, ಮುಕ್ತ ಮಾರುಕಟ್ಟೆ ವ್ಯವಸ್ಥೆ ಈ ದೇಶವನ್ನು ಪ್ರವೇಶಿಸಿದೆ. ಅದರಿಂದಾಗಿ ನೀವು ನಿರೀಕ್ಷಿಸದ ಒಂದಷ್ಟು ಬೆಳವಣಿಗೆಗಳು ಆಗಿರುವುದು ನಿಜ. ಅದರ ಲಾಭವನ್ನು ಭಾರತದ ಮಹಿಳೆಯರು ಮತ್ತು ದಲಿತ, ಹಿಂದುಳಿದ, ಅಲ್ಪಸಂಖ್ಯಾತರು ಪಡೆಯುತ್ತಿರುವುದು ಸಹ ವಾಸ್ತವಿಕವಾಗಿದೆ......

ಇನ್ನು ಕಾನೂನು, ಸುವ್ಯವಸ್ಥೆ, ಅಪರಾಧಗಳು, ಅದಕ್ಕೆ ಇರುವ ಕಠಿಣ ನಿಯಮಗಳು ಈ ವಿಷಯಕ್ಕೆ ಬಂದರೆ ಖಂಡಿತವಾಗಿಯೂ ನಿಮ್ಮ ಆಶಯಕ್ಕೆ ವಿರುದ್ಧವಾಗಿಯೇ ಎಲ್ಲವೂ ಚಲಿಸುತ್ತಿದೆ. ಅಂದರೆ ಕಾನೂನುಗಳನ್ನು ಉಪಯೋಗಿಸಿಕೊಂಡೇ ಅಪರಾಧಗಳನ್ನು ಮಾಡುತ್ತಾ, ಕಾನೂನಿನ ಬಲೆಯಿಂದ ನುಸುಳಿಕೊಂಡು, ಮತ್ತೆ ಅಪರಾಧಗಳನ್ನು ಮಾಡುತ್ತಾ, ಕಾನೂನು ಅಪರಾಧಿಗಳಿಗೆ ವರದಾನ ಎಂಬ ಪರಿಸ್ಥಿತಿ ಉದ್ಭವವಾಗಿದೆ. ಕೊಲೆ, ಅತ್ಯಾಚಾರ, ಭ್ರಷ್ಟಾಚಾರ, ವಂಚನೆ ಯಾವುದೇ ವಿಷಯವಿರಲಿ, ಶಿಕ್ಷೆಯಾಗುವ ಪ್ರಮಾಣ ತುಂಬಾ ಕಡಿಮೆ ಇದೆ. ಬಹುತೇಕ ಅಮಾಯಕರು, ಅಸಹಾಯಕರು, ದುರ್ಬಲರು, ಹಣವಿಲ್ಲದವರು, ಹಟ್ಟಾ ಕ್ರಿಮಿನಲ್‌ಗಳ ವಿಷಯದಲ್ಲಿ ಮಾತ್ರ ಶಿಕ್ಷೆಯಾಗುತ್ತದೆ. ಉಳಿದ ಬಹುತೇಕ ಪ್ರಭಾವಶಾಲಿಗಳು ಈ ಕಾನೂನನ್ನು ಉಪಯೋಗಿಸಿಕೊಂಡು ಅಪರಾಧ ಮಾಡಿಯೂ ಬಚವಾಗುತ್ತಿದ್ದಾರೆ. ಇದು ಮಾತ್ರ ದುರ್ದೈವದ ಸಂಗತಿ. ಈ ಬಗ್ಗೆ ಇಡೀ ದೇಶ ನಾಚಿಕೆಯಿಂದ, ಅಸಹನೆಯಿಂದ ಕುದಿಯುತ್ತಿದೆ.....

ಅಂಬೇಡ್ಕರ್ ಅವರೇ,

ನೂರು ಅಪರಾಧಿಗಳು ಬಿಡುಗಡೆಯಾದರೂ ಪರವಾಗಿಲ್ಲ, ಒಬ್ಬ ನಿರಪರಾಧಿಗೆ ಶಿಕ್ಷೆ ಆಗಬಾರದು ಎಂದು ನಿಮ್ಮ ಮಾನವೀಯ ಮೌಲ್ಯಗಳ ಹಿನ್ನೆಲೆಯ, ಅತ್ಯಂತ ಸೂಕ್ಷ್ಮವಾದ – ಸೂಕ್ತವಾದ ಹಾಗೆಯೇ ಮುಗ್ಧತೆಯನ್ನು ಎತ್ತಿ ಹಿಡಿಯುವ ಒಂದು ಮಾತನ್ನು ಹೇಳಿದ್ದೀರಿ. ಅಪರಾಧಗಳನ್ನು ಖಚಿತ ಸಾಕ್ಷಿಗಳ ಆಧಾರದ ಮೇಲೆ ನಿರ್ಧರಿಸುವ ನ್ಯಾಯ ವ್ಯವಸ್ಥೆ ಇರಬೇಕು ಎಂಬ ನಿಲುವು ನಿಮ್ಮದಾಗಿತ್ತು. ಆದರೆ ಈಗ ಅದನ್ನೇ ಉಪಯೋಗಿಸಿಕೊಂಡು, ಅಪರಾಧಿಗಳೇ ಬಿಡುಗಡೆಯಾಗಿ, ನಿರಪರಾಧಿಗಳಿಗೆ ಶಿಕ್ಷೆಯಾಗುತ್ತಿರುವ ದುರಂತ ಸನ್ನಿವೇಶ ಸೃಷ್ಟಿಯಾಗಿದೆ.....

ಅಂಬೇಡ್ಕರ್ ಜಿ,

ನಿಮ್ಮ ವ್ಯಕ್ತಿತ್ವ ನೀವು ಬದುಕಿರುವ ಸಂದರ್ಭಕ್ಕಿಂತ ಈಗ ಬೃಹದಾಕಾರವಾಗಿ ಬೆಳೆದಿದೆ. ನಿಮ್ಮ ಜನಪ್ರಿಯತೆ ಇಡೀ ದೇಶದಾದ್ಯಂತ ವ್ಯಾಪಿಸಿದೆ. ನಿಮ್ಮ ಸಾಮರ್ಥ್ಯ, ಪ್ರತಿಭೆ ಇಡೀ ವಿಶ್ವಕ್ಕೆ ಪರಿಚಯವಾಗಿದೆ. ನಿಮ್ಮ ದೂರದೃಷ್ಟಿ ಎಲ್ಲರ ಗಮನ ಸೆಳೆದಿದೆ. ಹಾಗೆಂದು ನಿಮ್ಮ ವಿರುದ್ಧ ಟೀಕೆಗಳು ಇಲ್ಲವೆಂದಲ್ಲ. ಸಾಕಷ್ಟು ಟೀಕೆಗಳು ಸಹ ನಿಮ್ಮ ಮೇಲೆಯೂ ಇದೆ. ಆದರೆ ನಿಮ್ಮ ಆ ವಿದ್ವತ್ಪೂರ್ಣ ವ್ಯಕ್ತಿತ್ವ ಆ ಟೀಕೆಗಳಿಗೆ ಮಹತ್ವ ನೀಡಲು ಸಾಧ್ಯವಾಗುತ್ತಿಲ್ಲ. ಜೊತೆಗೆ ನಿಮ್ಮ ಅನುಯಾಯಿಗಳ, ಹಿಂಬಾಲಕರ, ಹಿತೈಷಿಗಳ, ಮೆಚ್ಚುವವರ, ಸಂಘಟನಾತ್ಮಕ ಶಕ್ತಿ ನಿಮ್ಮ ವಿರುದ್ಧ ಧ್ವನಿ ಎತ್ತುವವರು ಯೋಚಿಸುವಂತೆ ಮಾಡಿದೆ......

ನಿಮ್ಮ ಬಗ್ಗೆ ಸಾಕಷ್ಟು ಅಧ್ಯಯನ, ಚಿಂತನೆಗಳು ನಡೆಯುತ್ತಲೇ ಇವೆ. ಕೆಲವೊಮ್ಮೆ ನಿಮ್ಮನ್ನು ಸಹ ದೈವತ್ವಕ್ಕೇರಿಸುವ ಅತಿರೇಕವೂ ಸಹ ನಡೆಯುತ್ತಿರುತ್ತದೆ. ಆದರೂ ಆಧುನಿಕ ಭಾರತದ ಯಶಸ್ಸಿನ ಕೆಲವೇ ಪ್ರಮುಖರಲ್ಲಿ ನೀವು ಸಹ ಒಬ್ಬರಾಗಿ ವಿರಾಜಮಾನರಾಗಿದ್ದೀರಿ. ಇಂದು ಭಾರತ ವಿಶ್ವದ ಬಲಿಷ್ಠ ರಾಷ್ಟ್ರವಾಗಿ ಗುರುತಿಸಿಕೊಳ್ಳಲು ಸಾಧ್ಯವಾಗಿರುವುದು ನಿಮ್ಮ ಆಳ ಮತ್ತು ದೂರದೃಷ್ಟಿಯ ಚಿಂತನೆಯ ಆ ನೀತಿ ನಿಯಮಗಳು......

ನೀವು ನೀಡಿದ ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳು, ಅಭಿವ್ಯಕ್ತಿ ಸ್ವಾತಂತ್ರ್ಯ, ಧಾರ್ಮಿಕ ಸ್ವಾತಂತ್ರ್ಯ, ಮುಕ್ತತೆ ಎಲ್ಲವೂ ಈ ದೇಶ ಬಲಿಷ್ಠವಾಗಿ ಬೆಳೆಯಲು ಕಾರಣವಾಗಿದೆ. ಹಾಗೆಯೇ ನೀವು ಬಯಸಿದ ಮಹಿಳಾ ಸಬಲೀಕರಣ ಇಂದು ಹೆಮ್ಮರವಾಗಿ ಬೆಳೆದು ಭಾರತದ ಸಮಗ್ರ ಅಭಿವೃದ್ಧಿಯಲ್ಲಿ ಮಹಿಳೆಯರು ಬಹು ಮುಖ್ಯ ಪಾತ್ರ ವಹಿಸುತ್ತಿರುವ ಒಳ್ಳೆಯ ಸುದ್ದಿಯು ನಿಮಗಿದೆ. ಜನರು ಜೀವನಮಟ್ಟ ಸಾಕಷ್ಟು ಪ್ರಮಾಣದಲ್ಲಿ ಸುಧಾರಿಸಿದೆ.......

ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರೇ, ಈ ರೀತಿ ಅನೇಕ ವಿಷಯಗಳನ್ನು ಹೇಳುತ್ತಾ ಹೋಗಬಹುದು. ನಿಮ್ಮ ಜನುಮದಿನದ ನೆನಪಿನ ಈ ಶುಭ ಸಂದರ್ಭದಲ್ಲಿ ಖಂಡಿತವಾಗಿಯೂ ನೀವು ಕಂಡ ಆಶಯದ ಭಾರತ ಯಶಸ್ಸಿನತ್ತಾ ಸಾಗಿದೆ ಎಂದು ನಿಸ್ಸಂಶಯವಾಗಿ ಹೇಳಬಹುದು. ಆದರೆ ಅದೇ ಸಂದರ್ಭದಲ್ಲಿ ವಿರುದ್ಧ ಚಿಂತನೆಗಳು ಬೆಳವಣಿಗೆಯಾಗುತ್ತಿರುವುದು ಸ್ವಲ್ಪ ಆಘಾತಕಾರಿ ವಿಷಯವಾಗಿದೆ. ಆದರೆ ಮತದಾರ ಎಚ್ಚೆತ್ತುಕೊಂಡರೆ ಅದನ್ನು ಸಹ ನಿಯಂತ್ರಿಸುವುದು ಕಷ್ಟವೇನಲ್ಲ. ಜನ ನಿಧಾನವಾಗಿಯಾದರೂ ಜಾಗೃತಿಗೊಳ್ಳುತ್ತಾರೆ ಎಂಬ ಭರವಸೆಯಂತೂ ಇದ್ದೇ ಇದೆ.....

ಒಟ್ಟಿನಲ್ಲಿ ನೀವು ನಿಮ್ಮ ಜೀವನದಲ್ಲಿ ನಡೆಸಿದ ಹೋರಾಟ ಇಂದು ಹೆಮ್ಮರವಾಗಿ ಬೆಳೆದು ಯಶಸ್ಸಿನ ಹಾದಿಯಲ್ಲಿದೆ ಎಂದು ನಿಸ್ಸಂಶಯವಾಗಿ ಹೇಳಬಹುದು. ಅದಕ್ಕಾಗಿ ನಿಮಗೆ ಹೃದಯಪೂರ್ವಕ ವಂದನೆಗಳನ್ನು ಅರ್ಪಿಸುತ್ತಾ....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರಜೀವನಮಟ್ಟಸುಧಾರಣೆಯಗುರಿಯೊಂದಿಗೆ, ಮನಗಳಲ್ಲಿ,ಮನೆಗಳಲ್ಲಿ,ಮತಗಳಲ್ಲಿ,ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,

» **ವಿವೇಕಾನಂದ ಎಚ್.ಕೆ.**
**9844013068......**

---

## ದೃಷ್ಟಿ ದೋಷವುಳ್ಳವರು ಆಶಾಕಿರಣ ಯೋಜನೆ ಸದ್ಬಳಕೆಮಾಡಿಕೊಳ್ಳಿ.



» **ಹೊಸದುರ್ಗ**

ದೃಷ್ಟಿ ದೋಷವುಳ್ಳ ಪ್ರತಿಯೊಬ್ಬ ನಾಗರೀಕರೂ ರಾಷ್ಟ್ರೀಯ ಅಂಧತ್ವ ನಿವಾರಣಾ ಕಾರ್ಯಕ್ರಮದ ಆಶಾಕಿರಣ ಯೋಜನೆಯನ್ನು ಸದ್ಬಳಕೆ ಮಾಡಿಕೊಳ್ಳಿ ಎಂದು ಶ್ರೀರಾಂಪುರ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಯೋಗೀಶ್ ಹೇಳಿದರು.ತಾಲ್ಲೂಕಿನ ಶ್ರೀರಾಂಪುರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ರಾಷ್ಟ್ರೀಯ ಅಂಧತ್ವ ನಿವಾರಣಾ ಕಾರ್ಯಕ್ರಮದ ಆಶಾಕಿರಣ ಯೋಜನೆಯಡಿ ಉಚಿತ ಕನ್ನಡಕ ವಿತರಣಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಚಿಕ್ಕಮಕ್ಕಳಿಂದ ವಯೋವೃದ್ಧರವರೆಗೆ ವಿವಿಧ ಕಾರಣಗಳಿಂದಾಗಿ ದೂರದೃಷ್ಟಿ ದೋಷ, ಸಮೀಪ ದೃಷ್ಟಿದೋಷ ಹಾಗೂ ಇನ್ನಿತರೆ ದೃಷ್ಟಿದೋಷವುಳ್ಳವರಿಗೆ ಕಣ್ಣು ಪರೀಕ್ಷೆ ನಡೆಸಿ, ಅಗತ್ಯವಿದ್ದವರಿಗೆ ಶಸ್ತ್ರಚಿಕಿತ್ಸೆ ನಡೆಸಿ ಅವರಿಗೆ ಉಚಿತ ಕನ್ನಡಕವನ್ನೂ ನೀಡುವಂತಹ ವ್ಯವಸ್ಥೆ ಆಶಾಕಿರಣ ಯೋಜನೆಯಲ್ಲಿದ್ದು, ಈ ಕಾರ್ಯಕ್ರಮವು ಕೇಂದ್ರ ಸರ್ಕಾರದ ರಾಷ್ಟ್ರೀಯ ಅಂಧತ್ವ ನಿವಾರಣಾ ಕಾರ್ಯಕ್ರಮದ ಯೋಜನೆಯಾಗಿದೆ. ಶ್ರೀರಾಂಪುರದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಆಶಾಕಿರಣ ಯೋಜನೆಯಡಿಯಲ್ಲಿ ಈಗಾಗಲೇ ಕೆಲವು ಸಲಕರಣೆಗಳು ಬಂದಿದ್ದು, ಸದ್ಯದಲ್ಲಿಯೇ ಯಾವುದಾದರೂ ಒಂದು ಆಸ್ಪತ್ರೆಯ ಸಹಯೋಗದಲ್ಲಿ ಇಲ್ಲಿಯೇ ಕಣ್ಣಿನ ಪರೀಕ್ಷೆ, ಹಾಗೂ ಕನ್ನಡಕ ವಿತರಣೆ ವ್ಯವಸ್ಥೆಯಾಗಲಿದೆ. ಅದು ಈ ಭಾಗದ ಬಹಳಷ್ಟು ಜನರಿಗೆ ಅನುಕೂಲವಾಗಲಿದೆ. ಜಿಲ್ಲೆಯಲ್ಲಿ ಮೂರು ಆಸ್ಪತ್ರೆಗಳಿಗೆ ಈ ವ್ಯವಸ್ಥೆ ಜಾರಿಯಾಗಲಿದ್ದು ಅದರಲ್ಲಿ ಶ್ರೀರಾಂಪುರವೂ ಒಂದಾಗಿದ್ದು, ಈ ವ್ಯವಸ್ಥೆ ಜಾರಿಯಾದರೆ ಕಣ್ಣಿನ ಪರೀಕ್ಷೆಗೆ ಒಳಪಟ್ಟ ಒಂದು ವಾರದಲ್ಲಿ ಅವರಿಗೆ ಕನ್ನಡಕ ವಿತರಿಸಲಾಗುತ್ತದೆ. ದೃಷ್ಟಿದೋಷವುಳ್ಳ ಪ್ರತಿಯೊಬ್ಬರೂ ಇದರ ಸದುಪಯೋಗಪಡೆದುಕೊಳ್ಳಬೇಕು ಎಂದು ಹೇಳಿದರು.ವೈದ್ಯರುಗಳಾದ, ಡಾ.ಲೋಹಿತ್, ಡಾ.ರಶ್ಮಿ, ಡಾ.ಅರ್ಚನ, ನೇತ್ರಾಧಿಕಾರಿ ರಾಮಮೂರ್ತಿ, ಕಛೇರಿಯ ಅಧೀಕ್ಷಕ ಭೋಜರಾಜ್ ಸೇರಿದಂತೆ ಶುಶ್ರೂಕರು, ಸಿಬ್ಬಂಧಿ ಹಾಗೂ ಆಶಾ ಕಾರ್ಯಕರ್ತೆಯರು ಇದ್ದರು.

---

# ನಗರದಲ್ಲಿ ಭಾರತ್ ಸಂವಾದ ಅಭಿಯಾನ

» **ಚಿತ್ರದುರ್ಗ**

ಸಾಂವಿಧಾನಿಕವಾಗಿ ಸಾರ್ವಭೌಮ, ಸಮಾಜವಾದಿ, ಜಾತ್ಯತೀತ ಮತ್ತು ಪ್ರಜಾಸತ್ತಾತ್ಮಕ ಭಾರತೀಯ ರಾಷ್ಟ್ರಕ್ಕೆ ನಾಗರಿಕರ ಬದ್ಧತೆಯನ್ನು ನಿರಂತರವಾಗಿ ಪೋಷಿಸುವುದು ಮತ್ತು ನಿರ್ವಹಿಸುವುದು ಭಾರತ್ ಸಂವಾದ್ ಅಭಿಯಾನದ ಉದ್ದೇಶವಾಗಿದೆ ಎಂದು ಭಾರತ್ ಸಂವಾದ ಅಭಿಯಾನದ ಬಿಹಾರ್ ರಾಜ್ಯದ ಸಂಚಾಲಕರು ಮತ್ತು ಬಿಹಾರ ರಾಜ್ಯದ ಹೈಕೋರ್ಟಿನ ನ್ಯಾಯವಾದಿಗಳಾದ ವಿಜಯೇಂದ್ರ ಕುಮಾರ್ ತಿಳಿಸಿದ್ದಾರೆ.



ಚಿತ್ರದುರ್ಗ ನಗರದ ಪ್ರವಾಸಿ ಮಂದಿರದಲ್ಲಿ ಗುರುವಾರ ಭಾರತ ಸಂವಾದ್ ಅಭಿಯಾನದ ಅಂಗವಾಗಿ ಏರ್ಪಡಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಭಾರತ್ ಸಂವಾದ್ ಅಭಿಯಾನ ಪರಿಚಲನೆ ಮಾಡಿ ಭಾರತದ ಜನರು, ಭಾರತವನ್ನು ಸಾರ್ವಭೌಮ, ಸಮಾಜವಾದಿ, ಜಾತ್ಯತೀತ, ಪ್ರಜಾಸತ್ತಾತ್ಮಕ, ಗಣರಾಜ್ಯವಾಗಿ ರೂಪಿಸಲು ಗಂಭೀರವಾಗಿ ಸಂಕಲ್ಪ ಮಾಡಲಾಗಿದೆ. ಭಾರತೀಯ ಸ್ವಾತಂತ್ರ್ಯ ಹೋರಾಟದ ಆದರ್ಶಗಳನ್ನು ಮತ್ತು ರಾಷ್ಟ್ರೀಯ ಜೀವನದ ಅವಿಭಾಜ್ಯ ಅಂಗವಾಗಿ ಭಾರತೀಯ ಸಂವಿಧಾನದ ಮೂಲಭೂತ ಮೌಲ್ಯಗಳನ್ನು ಎತ್ತಿಹಿಡಿಯುವುದು ಎಲ್ಲಾ ಭಾರತೀಯ ನಾಗರಿಕರ ಸ್ಪಷ್ಟ ನಾಗರಿಕ ಕರ್ತವ್ಯವಾಗಿದೆ. ನಾಗರಿಕರ ನಡುವಿನ ನಿರಂತರ ಸಂವಾದದ ಮೂಲಕ ಮಾತ್ರ ಈ ನಾಗರಿಕ ಕರ್ತವ್ಯವು ಅವರ ಚಿಂತನೆಯ ಪ್ರಕ್ರಿಯೆಯ ಶಾಶ್ವತ ಭಾಗವಾಗಿ ಉಳಿಯುತ್ತದೆ. ಇದು ಸಾಂವಿಧಾನಿಕ ಮೌಲ್ಯಗಳು ಮತ್ತು ಸಂಸ್ಥೆಗಳ ತ್ವರಿತ ಅಪಮೌಲೀಕರಣವನ್ನು ತಡೆಯುತ್ತದೆ ಎಂದರು.

ಭಾರತದ ಸಂವಿಧಾನದ ಬೆಳಕಿನಲ್ಲಿ ಮಾತ್ರ ತಮ್ಮ ನಾಗರಿಕ ಗುರುತನ್ನು ನೋಡುವ ಮತ್ತು ಯಾವುದೇ ಧರ್ಮ, ಜಾತಿ, ಪ್ರದೇಶ, ಕುಟುಂಬ, ವ್ಯಕ್ತಿ ಇತ್ಯಾದಿಗಳಿಗೆ ಸೀಮಿತವಾಗಿರದೆ ಭಾರತದ ಜನರು ಭಾರತ್ ಸಂವಾದ್ ಅಭಿಯಾನದ ಸಹಜ ಭಾಗಿಗಳಾಗಿರುತ್ತಾರೆ. ಇಂತಹವರಿಗೆ ದೇಶದಲ್ಲಿ ಕೊರತೆಯಾಗಬಾರದು. ಕಳೆದ ಮೂರು ದಶಕಗಳಲ್ಲಿ ನವ-ಸಾಮ್ರಾಜ್ಯಶಾಹಿಯ ಸೇವೆಯಲ್ಲಿ ಆಳುವ ವರ್ಗಗಳು ಹೇರಿದ ಕಾರ್ಪೊರೇಟ್-ಕೋಮುವಾದ ನಂಟು ಆಧುನಿಕ ಭಾರತೀಯ ರಾಷ್ಟ್ರದ ಚೈತನ್ಯವನ್ನು ಬಹಳವಾಗಿ ವಿರೂಪಗೊಳಿಸಿದೆ, ಸ್ವಾತಂತ್ರ್ಯ ಚಳುವಳಿಯ ಪ್ರಬಲ ಪ್ರಭಾವ ಮತ್ತು ಸಂಕೀರ್ಣ ಜಾಗತಿಕ ಬೆಳವಣಿಗೆಗಳಿಂದ ಹೊರಹೊಮ್ಮಿದೆ. ಭಾರತದಲ್ಲಿ ಆಸಕ್ತಿ ಹೊಂದಿರುವ ಅಥವಾ ಸಮಾನವಾದ ಶಾಂತಿಯುತ ಜಗತ್ತನ್ನು ಬಯಸುವ ಇತರ ದೇಶಗಳ ನಾಗರಿಕರು ಮತ್ತಷ್ಟು ಪ್ರಜ್ಞೆಯನ್ನು ಹೆಚ್ಚಿಸಲು ಭಾರತ್ ಸಂವಾದ್ ಅಭಿಯಾನದಲ್ಲಿ ಭಾಗವಹಿಸಬೇಕು. ಭಾರತ್ ಸಂವಾದ್ ಅಭಿಯಾನದಲ್ಲಿ ಮಹಿಳೆಯರ ಹೆಚ್ಚಿನ ಭಾಗವಹಿಸುವಿಕೆಯು ಮಹತ್ವದ ಹೊಸ ಆಯಾಮಗಳನ್ನು ನೀಡಲು ಸಹಾಯ ಮಾಡುತ್ತದೆ ಎಂದು ತಿಳಿಸಿದರು.

ಭಾರತ್ ಸಂವಾದ್ ಅಭಿಯಾನದ ಯಾವುದೇ ನಡೆಸುವ ಕೇಂದ್ರ ಅಥವಾ ಸಂಸ್ಥೆ ಇಲ್ಲ. ಇದು ನಾಗರಿಕರಿಂದ ನಾಗರಿಕರಿಗಾಗಿ ನಾಗರಿಕರ ಅಭಿಯಾನವಾಗಿದೆ. ಭಾರತ್ ಸಂವಾದ್ ಅಭಿಯಾನದ ಒತ್ತಡವು ಜನರ ನಡುವಿನ ಪರಸ್ಪರ ಮತ್ತು ನೇರ ಸಂವಹನದ ಮೇಲೆ ಇರುತ್ತದೆ. ಆದಾಗ್ಯೂ, ಇದು ಕೇವಲ ಸಮಾನ ಮನಸ್ಕ ಜನರ ನಡುವಿನ ಸಂಭಾಷಣೆಯಲ್ಲ. ವಿಭಿನ್ನ ದೃಷ್ಟಿಕೋನಗಳು ಮತ್ತು ನಂಬಿಕೆಗಳನ್ನು ಹೊಂದಿರುವ ಜನರು ಭಾರತ್ ಸಂವಾದ್ ಅಭಿಯಾನಕ್ಕೆ ಸೇರಬಹುದು ಮತ್ತು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಬಹುದು ಎಂದ ಅವರು, ಇಂದಿನ ದಿನಮಾನದಲ್ಲಿ ನಮ್ಮನ್ನಾಳುವ ರಾಜಕೀಯ ಪಕ್ಷಗಳು ಶ್ರೀಮಂತರ ಪರವಾಗಿ ಕೆಲಸವನ್ನು ಮಾಡುತ್ತಾ ದೇಶವನ್ನು ಕಾರ್ಪೊರೇಟ್‌ಗಳಿಗೆ ಬಲಿಯಾಗಿಸುತ್ತಿದ್ದಾರೆ. ಬಡ ಜನತೆಯ ನೋವನ್ನು ಯಾರು ಸಹಾ ಕೇಳುತ್ತಿಲ್ಲ, ಎಲ್ಲರು ಸಹಾ ಶ್ರೀಮಂತರ ಪರವಾಗಿ ಇದ್ದಾರೆ ಅಧಿಕಾರವನ್ನು ಹಿಡಿಯಲು ಮುಂದಾಗಿದ್ದಾರೆ, ಬಡವರನ್ನು ಮತದ ಬ್ಯಾಂಕ್ ಆಗಿ ಮಾಡಿಕೊಂಡಿದ್ದಾರೆ ಎಂದು ದೂರಿದರು,

ಕಾರ್ಯಕ್ರಮದಲ್ಲಿ ಭಾರತ ಸಂವಾದ ಅಭಿಯಾನದ ಕರ್ನಾಟಕ ರಾಜ್ಯ ಸಂಚಾಲಕರಾದ ಲಕ್ಷ್ಮಿಕಾಂತ.ಎಸ್, ಅಪ್ಪ ಸಾಹೇಬ್, ಪದಾಧಿಕಾರಿಗಳಾದ ಶಿವಕುಮಾರ್, ಮಹಲಿಂಗಪ್ಪ, ತಿಪ್ಪೇಸ್ವಾಮಿ, ರಾಜಣ್ಣ, ಸತ್ಯಪ್ಪ, ಗುರುಮೂರ್ತಿ, ನಾಗರಾಜಪ್ಪ, ಶಫೀವುಲ್ಲಾ, ಚಂದ್ರಶೇಖರ್, ಬಾಷಾ ಸೇರಿದಂತೆ ಇತರರು ಭಾಗವಹಿಸಿದ್ದರು.

---

## ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತ, ಬಿಳಿ ಜೋಳ ಖರೀದಿ

**ದಾವಣಗೆರೆ:** ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಮೂಲಕ ಪ್ರಸಕ್ತ ಸಾಲಿನ ಹಿಂಗಾರು ಹಂಗಾಮಿನಲ್ಲಿ ಭತ್ತ ಹಾಗೂ ಬಿಳಿ ಜೋಳವನ್ನು ರೈತರಿಂದ ಖರೀದಿಸಲು ಅವಕಾಶ ಕಲ್ಪಿಸಿದೆ. ಅದರಂತೆ ಜಿಲ್ಲಾ ವ್ಯಾಪ್ತಿಯಲ್ಲಿನ ಬಿತ್ತನೆ ಪ್ರಮಾಣ ಆಧರಿಸಿ ಭತ್ತ ಕ್ವಿಂಟಾಲ್‌ಗೆ ರೂ.2300 ಹಾಗೂ ಭತ್ತ ಗ್ರೇಡ್‌ಎ ರೂ.2320 ಗಳಂತೆ ಮತ್ತು ಹೈಬ್ರಿಡ್ ಜೋಳವನ್ನು ಪ್ರತಿ ಕ್ವಿಂಟಾಲ್‌ಗೆ ರೂ.3371/- ಹಾಗೂ ಮಾಲ್ದಂಡಿ ಜೋಳವನ್ನು ಕ್ವಿಂಟಾಲ್‌ಗೆ ರೂ. 3421/- ನಂತೆ ಯಾವುದೇ ವ್ಯತ್ಯಾಸಗಳಿಗೆ ಅವಕಾಶ ನೀಡದೆ ನೊಂದಣಿ ಮತ್ತು ಖರೀದಿಗೆ ಕ್ರಮವಹಿಸಲು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ತಿಳಿಸಿದರು. ಪ್ರಸಕ್ತ ಸಾಲಿನ ಹಿಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತ ಮತ್ತು ಬಿಳಿಜೋಳ ಖರೀದಿಸಲು ಮಾರ್ಚ್ 15 ರಿಂದ ನೊಂದಣಿ ಪ್ರಕ್ರಿಯ ಪ್ರಾರಂಭಿಸಲಾಗಿದ್ದು, ಮೇ 31 ರವರೆಗೆ ನೊಂದಣಿ ಮತ್ತು ಖರೀದಿ ಪ್ರಕ್ರಿಯೆ ನಡೆಯಲಿದೆ.

---

## ಶಾಸಕ ಡಾ.ಎಂ.ಚಂದ್ರಪ್ಪನವರಿಂದ ಚನ್ನಪ್ಪನಹಟ್ಟಿ ಗ್ರಾಮದಲ್ಲಿ ನೂತನ ಸಿ.ಸಿ.ರಸ್ತೆ ಕಾಮಗಾರಿಗೆ ಭೂಮಿಪೂಜೆ



» **ಹೊಳಲ್ಕೆರೆ**

ಜೋಗ್‌ಫಾಲ್ಸ್‌ನಿಂದ ನೇರವಾಗಿ ವಿದ್ಯುತ್ ಪಡೆಯಲು ಚಿಕ್ಕಜಾಜೂರಿನ ಕೋಟೆಹಾಳ್ ಸಮೀಪ ಹದಿಮೂರುವರೆ ಎಕರೆ ಜಾಗದಲ್ಲಿ ಐದುನೂರು ಕೋಟಿ ರೂ.ವೆಚ್ಚದಲ್ಲಿ ನಾಲ್ಕುನೂರು ಕೆ.ವಿ. ವಿದ್ಯುತ್ ಪವರ್ ಸ್ಟೇಷನ್ ನಿರ್ಮಾಣ ಮಾಡಲಾಗುವುದೆಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ತಾಲ್ಲೂಕಿನ ಚನ್ನಪ್ಪನಹಟ್ಟಿ ಗ್ರಾಮದಲ್ಲಿ 30 ಲಕ್ಷ ರೂ.ವೆಚ್ಚದಲ್ಲಿ ನೂತನ ಸಿ.ಸಿ.ರಸ್ತೆ ಕಾಮಗಾರಿಗೆ ಗುರುವಾರ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.ಅಪ್ಪರ್‌ಭದ್ರಾ ಯೋಜನೆಯಿಂದ ಡಿಸೆಂಬರ್ ಒಳಗೆ ತಾಲ್ಲೂಕಿನಲ್ಲಿರುವ ಎಲ್ಲಾ ಕೆರೆಗಳಿಗೆ ನೀರು ತುಂಬಿಸಲಾಗುವುದು. ರೈತರ ತೋಟಗಳು ಒಣಗಬಾರದೆಂದು ವಿದ್ಯುತ್ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಿದ್ದೇನೆ. ಹಿರಿಯೂರಿನ ವಾಣಿವಿಲಾಸಸಾಗರದಿಂದ ನೀರು ತಂದು ಪ್ರತಿ ಹಳ್ಳಿಗಳಲ್ಲಿ ಮನೆ ಮನೆಗೆ ಶುದ್ದ ಕುಡಿಯುವ ನೀರು ಪೂರೈಸುವುದಕ್ಕಾಗಿ 367 ಕೋಟಿ ರೂ.ಗಳನ್ನು ಖರ್ಚು ಮಾಡಿದ್ದೇನೆ. ಇದರಿಂದ ಇನ್ನು ಮೂವತ್ತು ವರ್ಷಗಳ ಕಾಲ ಕುಡಿಯುವ ನೀರಿಗೆ ಅಭಾವವಿರುವುದಿಲ್ಲ ಎಂದು ತಿಳಿಸಿದರು.ರಾಜ್ಯದಲ್ಲಿ ಸರ್ಕಾರ ಯಾವುದಿದೆ ಎನ್ನುವುದು ಮುಖ್ಯವಲ್ಲ. ನಾನು ವಿರೋಧ ಪಕ್ಷದ ಶಾಸಕನಾದರೂ ದಿನನಿತ್ಯವೂ ಕಾಮಗಾರಿ ನಡೆಸುವಷ್ಟು ಅನುದಾನ ತರುವ ಯೋಗ್ಯತೆಯಿಟ್ಟುಕೊಂಡಿದ್ದೇನೆ. 28 ಕೋಟಿ ರೂ.ವೆಚ್ಚದಲ್ಲಿ ಕ್ರೀಡಾಂಗಣ ಕಟ್ಟಿಸಿದ್ದೇನೆ. ಈಜುಕೊಳ, ಒಳಾಂಗಣ ಕ್ರೀಡಾಂಗಣ, ಹೈಟೆಕ್ ಆಸ್ಪತ್ರೆ, ಮುನ್ಸಿಪಲ್ ಕಟ್ಟಡ, ಶಾಲಾ-ಕಾಲೇಜು, ಸಿ.ಸಿ.ರಸ್ತೆ ಹೀಗೆ ಕ್ಷೇತ್ರದ ಸರ್ವಾಂಗೀಣ ಅಭಿವೃದ್ದಿಗೆ ಹಗಲು-ರಾತ್ರಿ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆ.ಯಾರಿಂದಲೂಅರ್ಜಿಪಡೆದಿಲ್ಲ.ಏನನ್ನುಹೇಳಿಸಿಕೊಳ್ಳದೆ ಎಲ್ಲಿ ಯಾವ ಕೆಲಸ ಮಾಡಿದರೆ ಜನರಿಗೆ ಒಳ್ಳೆಯದಾಗುತ್ತದೆ ಎನ್ನುವ ಅರಿವಿಟ್ಟುಕೊಂಡಿದ್ದೇನೆ. ಜವಾಬ್ದಾರಿಯಿರುವ ಶಾಸಕನಿಗೆ ಅಭಿವೃದ್ದಿ ಮಾಡಬೇಕೆಂಬ ಚಿಂತನೆಯಿರುತ್ತದೆ. 493 ಹಳ್ಳಿಗಳಲ್ಲಿ ಇಂತಹ ಕೆಲಸ ಆಗಿಲ್ಲ ಅಂತ ಇಲ್ಲ. ಹುಡುಕಿ ಹುಡುಕಿ ಕೆಲಸ ಮಾಡಿಸುತ್ತಿದ್ದೇನೆಂದರು. ಪರಮೇಶ್ವರಪ್ಪ, ನಿವೃತ್ತ ಶಿಕ್ಷಕರುಗಳಾದ ಬಸವಂತಪ್ಪ, ಶಿವಣ್ಣ, ಚೇತನ್‌ಕುಮಾರ್, ಕೆ.ಆರ್.ಐ.ಡಿ.ಎಲ್.ಇಂಜಿನಿಯರ್ ತೇಜಸ್, ಗುತ್ತಿಗೆದಾರ ಬಾಬಣ್ಣ ಹಾಗೂ ಗ್ರಾಮದ ಮುಖಂಡರುಗಳು ಈ ಸಂದರ್ಭದಲ್ಲಿ ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T